ಸಂಪುಟ : 11 ಸಂಚಿಕೆ: 75 ಪುಟ : 4+2 ಬೆಲೆ: 3.00 ಬುಧವಾರ ಎಪ್ರಿಲ್ 22 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 75 Pages : 4+2 Price : 3.00 Wednesday April 22 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಡಂಬಳದಲ್ಲಿ ಪ್ರಧಾನ ಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಮೇಳ



**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಶ್ರೀ ಜಗದ್ಗುರು ತೋಂಟ-ದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ ಡಂಬಳದ ಸಂಯುಕ್ತ ಆಶ್ರಯದಲ್ಲಿ ಎಪ್ರಿಲ್ 23ರಂದು ಗುರುವಾರಡಂಬಳದಲ್ಲಿಪ್ರಧಾನ ಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಮೇಳವನ್ನುಹಮ್ಮಿಕೊಳ್ಳಲಾಗಿದೆ.

ಈ ಮೇಳದಲ್ಲಿ ಯಾವುದೇ ವೃತ್ತಿಯಐಟಿಐತೇರ್ಗಡೆಯಾದ ಹಾಗೂ2ನೇವರ್ಷದಲ್ಲಿಅಧ್ಯಯನ ಮಾಡುತ್ತಿರುವಅಥವಾ1ವರ್ಷದ ವೃತ್ತಿ ತರಬೇತಿಯಲ್ಲಿ ಇರುವ ತರಬೇತಿದಾರರುಭಾಗವಹಿಸಲು ಅರ್ಹರಾಗಿದ್ದಾರೆ.

ರಾಜ್ಯದಪ್ರಸಿದ್ಧ15ಕ್ಕೂಹೆಚ್ಚು ಕೈಗಾರಿಕೆಗಳು ಈ ಮೇಳದಲ್ಲಿ ಭಾಗವಹಿಸಿ ತಮ್ಮ ಘಟಕಗಳಿಗೆ ಅಗತ್ಯವಿರುವ ಅಪ್ರೆಂಟಿಸ್ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳಲಿವೆ.ಆದ್ದರಿಂದ ಅರ್ಹವಿದ್ಯಾರ್ಥಿಗಳುಈಮೇಳದ ಸದುಪಯೋಗಪಡೆದುಕೊಳ್ಳಬೇಕು ಎಂದುಸಂಸ್ಥೆಯಪ್ರಾಚಾರ್ಯಎಸ್. ಎಂ.ಶಿವರಾಚಯ್ಯಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 9480240195ಹಾಗೂ9916163353 ಮೊಬೈಲ್ಸಂಖ್ಯೆಯನ್ನುಸಂಪರ್ಕಿಸಲು ಕೋರಲಾಗಿದೆ.

### ಬಿಲ್ಲು ಸೋಲಿಸಿದ ಕಾಂಗ್ರೆಸ್-ಮಿತ್ರಪಕ್ಷಗಳ ವಿರುದ್ಧ ಸಿ.ಸಿ ಪಾಟೀಲ ವಾಗ್ದಾಳಿ

# ಮಹಿಳಾ ಮೀಸಲಾತಿ ವಿರೋಧಿಸಿದವರಿಗೆ ಶಾಪ ತಪ್ಪದು!



> “ಇಂತಹ ಮಹತ್ವದ ಬಿಲ್ಲನ್ನು ಇಂಡಿ ಮೈತ್ರಿಕೂಟ ವಿರೋಧಿಸಿ ಸೋಲಿಸಿ ಸಂಭ್ರಮಾಚರಣೆ ಮಾಡಿರುವುದನ್ನು ದೇಶದ ಮಹಿಳೆಯರು ಗಮನಿಸಿದ್ದಾರೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸೇರಿದಂತೆ ಮಿತ್ರಪಕ್ಷಗಳು ಮಹಿಳೆಯರ ಆಕ್ರೋಶ ಮತ್ತು ಶಾಪಕ್ಕೆ ಗುರಿಯಾಗಲಿವೆ.”
>
> – **ಸಿ.ಸಿ. ಪಾಟೀಲ,** ಶಾಸಕ.

> “ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್‌ವಿಂಗಡಣೆ ವಿಷಯವನ್ನು ಪ್ರತ್ಯೇಕವಾಗಿ ಪರಿಗಣಿಸಲು ಸಾಧ್ಯವಿಲ್ಲ. ಬಿಲ್ಲು ಸೋಲಿಸುವ ಮೂಲಕ ಮಹಿಳೆಯರ ಜೊತೆಗೆ ವಿವಿಧ ರಾಜ್ಯಗಳ ಜನರಿಗೂ ಅನ್ಯಾಯವಾಗಿದೆ. ಮುಂದಿನ ದಿನಗಳಲ್ಲಿ ಬಿಜೆಪಿ ಮಹಿಳಾ ಮೀಸಲಾತಿ ಬಿಲ್ಲನ್ನು ಇನ್ನಷ್ಟು ಬಲವಾಗಿ ಜಾರಿಗೆ ತರುತ್ತದೆ ಎಂಬ ವಿಶ್ವಾಸವಿದೆ.”
>
> – **ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯ.

**■ ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭೆಯಲ್ಲಿ ಮಂಡನೆಯಾದ ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್‌ವಿಂಗಡಣೆ ಬಿಲ್ಲನ್ನು ಸೋಲಿಸಿದ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ವಿರುದ್ಧ ದೇಶದ ಮಹಿಳೆಯರಲ್ಲಿ ತೀವ್ರ ಆಕ್ರೋಶವಿದ್ದು, ಅವರಿಗೆ ಮಹಿಳೆಯರ ಶಾಪ ತಟ್ಟಲಿದೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದಿನ ಕಾಲದಲ್ಲಿ ಮಹಿಳೆಯರು ಯಾವುದೇ ಕ್ಷೇತ್ರದಲ್ಲಿಯೂ ಪುರುಷರಿಗೆ ಕಡಿಮೆಯಿಲ್ಲ. ಮಹಿಳಾ ಮೀಸಲಾತಿ ಜಾರಿಯಾಗುವುದರಿಂದ ದಶಕಗಳಿಂದ ಕೇಳಿಬರುತ್ತಿದ್ದ ಬೇಡಿಕೆ ಈಡೇರಲಿದ್ದು, ಲೋಕಸಭೆಯಲ್ಲಿ ಮಹಿಳೆಯರ ಧ್ವನಿ ಮತ್ತಷ್ಟು ಬಲವಾಗಲಿದೆ ಎಂದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಜಾರಿಗೊಂಡಿರುವ ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಕಾಂಗ್ರೆಸ್ ವಿರೋಧಿಸುತ್ತಲೇ ಬಂದಿದೆ. ಸಂವಿಧಾನದ ವಿಧಿ 370 ರದ್ದತಿಗೂ ವಿರೋಧ ವ್ಯಕ್ತಪಡಿಸಿತು. ಆದರೆ 370 ರದ್ದತಿಯ ನಂತರ ಕಾಶ್ಮೀರದಲ್ಲಿ ಪ್ರವಾಸೋದ್ಯಮ ಹೆಚ್ಚಾಗಿದೆ ಎಂದು ಅವರು ತಿಳಿಸಿದರು.

ಪಶ್ಚಿಮ ಬಂಗಾಳದಲ್ಲಿ ಮಮತಾ ದೀದಿ ಅವರು ನ್ಯಾಯಾಂಗ ವ್ಯವಸ್ಥೆಯ ಮೇಲೆಯೇ ಹಸ್ತಕ್ಷೇಪ ಮಾಡುವಂತ ಕ್ರಮಗಳಿಗೆ ಮುಂದಾಗಿರುವುದು ಸರಿಯಲ್ಲ. ಇಂತಹ ಕ್ರಮಗಳಿಗೆ ಭವಿಷ್ಯದಲ್ಲಿ ತಕ್ಕ ಬೆಲೆ ತೆರಬೇಕಾಗುತ್ತದೆ ಎಂದು ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಉಷಾ ದಾಸರ, ನಿರ್ಮಲಾ ಕೊಳ್ಳಿ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮಿ ಮಾನ್ವಿ, ಪ್ರಶಾಂತ ನಾಯ್ಕರ, ಶಶಿಧರ ದಿಂಡೂರ ಸೇರಿದಂತೆ ಬಿಜೆಪಿ ಮುಖಂಡರು ಭಾಗವಹಿಸಿದ್ದರು.

### ಪಶ್ಚಿಮ ಪದವೀಧರರ ಕ್ಷೇತ್ರದಲ್ಲಿ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ ಸುಧೀಂದ್ರ ದೇಶಪಾಂಡೆ

# ಪದವೀಧರ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆ



> “ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಬಿಜೆಪಿಯಿಂದ 10ಕ್ಕೂ ಹೆಚ್ಚು ಮಂದಿ ಟಿಕೆಟ್ ಆಕಾಂಕ್ಷಿಗಳು ಇದ್ದರು. ಆದರೆ ಪಕ್ಷ ಮತ್ತೆ ಎಸ್.ವಿ. ಸಂಕನೂರ ಅವರಿಗೆ ಟಿಕೆಟ್ ನೀಡಿದೆ. ಇಷ್ಟು ವರ್ಷ ಪಕ್ಷಕ್ಕೆ ನಿಷ್ಠೆಯಿಂದ ದುಡಿದಿದ್ದು, ಅದಕ್ಕೆ ಕೂಲಿ ಕೇಳುತ್ತಿದ್ದೇನೆ. ನನ್ನ ನಿರ್ಧಾರಕ್ಕೆ ಪಕ್ಷದ ಕೆಲವು ಹಿರಿಯರ ಬೆಂಬಲವೂ ಇದೆ.”
>
> **– ಸುಧೀಂದ್ರ ದೇಶಪಾಂಡೆ.**

**■ ವಿಜಯಸಾಕ್ಷಿ ಸುದ್ದಿ, ಗದಗ**

‘ಪಶ್ಚಿಮ ಪದವೀಧರರ ಮತಕ್ಷೇತ್ರದ ಚುನಾವಣೆ ಇದೇ ವರ್ಷ ನಡೆಯಲಿದ್ದು, ಬಿಜೆಪಿಯಿಂದ ಟಿಕೆಟ್ ಸಿಗದ ಕಾರಣ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸುತ್ತಿದ್ದೇನೆ’ ಎಂದು ಬಿಜೆಪಿ ಶಿಕ್ಷಣ ಪ್ರಕೋಷ್ಠದ ರಾಜ್ಯ ಸಮಿತಿ ಸದಸ್ಯ ಸುಧೀಂದ್ರ ದೇಶಪಾಂಡೆ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ‘2022ರಲ್ಲಿ ನಡೆದ ಪಶ್ಚಿಮ ಶಿಕ್ಷಕರ ಮತಕ್ಷೇತ್ರಕ್ಕೆ ಬಿಜೆಪಿಯಿಂದ ಪ್ರಬಲ ಆಕಾಂಕ್ಷಿಯಾಗಿದ್ದೆ. ಪಕ್ಷ ಅಂತಿಮಗೊಳಿಸಿದ್ದ ಮೂವರ ಪಟ್ಟಿಯಲ್ಲಿ ನನ್ನ ಹೆಸರೂ ಇತ್ತು. ಆದರೆ ಬಸವರಾಜ ಹೊರಟ್ಟಿ ಅವರು ಬಿಜೆಪಿಗೆ ಸೇರ್ಪಡೆಯಾದ ಹಿನ್ನೆಲೆಯಲ್ಲಿ ಅವಕಾಶ ತಪ್ಪಿತು’ ಎಂದು ತಿಳಿಸಿದರು.

ಈ ಬಾರಿಯೂ ಪಶ್ಚಿಮ ಪದವೀಧರರ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದರೂ, ಪಕ್ಷ ಎಸ್.ವಿ. ಸಂಕನೂರ ಅವರಿಗೆ ಟಿಕೆಟ್ ನೀಡಿದ ಕಾರಣ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದರು.

‘ಕಳೆದ ನಾಲ್ಕು ವರ್ಷಗಳಿಂದಲೇ ಪಶ್ಚಿಮ ಪದವೀಧರರ ಕ್ಷೇತ್ರದ ಆಕಾಂಕ್ಷಿಯಾಗಿ ಕಾರ್ಯಾರಂಭ ಮಾಡಿದ್ದೇನೆ. ನಾಲ್ಕು ಜಿಲ್ಲೆಗಳಲ್ಲಿ 25 ಸಾವಿರಕ್ಕೂ ಹೆಚ್ಚು ಪದವೀಧರರನ್ನು ಮತದಾರರ ಪಟ್ಟಿಗೆ ನೋಂದಣಿ ಮಾಡಿಸಿದ್ದೇನೆ. ಎಲ್ಲರೊಂದಿಗೆ ಉತ್ತಮ ಸಂಪರ್ಕ ಹೊಂದಿದ್ದು, ಕಾಂಗ್ರೆಸ್ ಹಾಗೂ ಬಿಜೆಪಿ ಅಭ್ಯರ್ಥಿಗಳನ್ನು ಹಿಂದಿಕ್ಕಿ ಗೆಲುವು ಸಾಧಿಸುವ ವಿಶ್ವಾಸವಿದೆ’ ಎಂದು ಹೇಳಿದರು.

‘39 ವರ್ಷಗಳಿಂದ ಆಡಳಿತ, ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿದ್ದು, ವಿಧಾನ ಪರಿಷತ್ ಸದಸ್ಯತ್ವಕ್ಕೆ ನನ್ನ ಅನುಭವ ಸೂಕ್ತವಾಗಿದೆ. ಹಲವು ಹಿರಿಯ ಬಿಜೆಪಿ ನಾಯಕರೊಂದಿಗೆ ಕೆಲಸ ಮಾಡಿದ ಅನುಭವವಿದ್ದು, ಅಭ್ಯರ್ಥಿಗಳಿಗೆ ರಾಜಕೀಯ ಸಲಹೆಗಾರನಾಗಿಯೂ ಸೇವೆ ಸಲ್ಲಿಸಿದ್ದೇನೆ. ಈಗ ಸ್ವತಃ ಚುನಾವಣಾ ಕಣಕ್ಕಿಳಿದಿದ್ದೇನೆ’ ಎಂದು ಹೇಳಿದರು.

ಪದವೀಧರರ ಸಮಸ್ಯೆಗಳ ಅಧ್ಯಯನಕ್ಕಾಗಿ ನಾಲ್ಕು ಜಿಲ್ಲೆಗಳನ್ನು ಸುತ್ತಾಡಿದ್ದೇನೆ. ಉದ್ಯೋಗದ ಕೊರತೆಯಿಂದ ಯುವಕರು ಮಹಾನಗರಗಳಿಗೆ ವಲಸೆ ಹೋಗುತ್ತಿರುವುದು ಕಂಡುಬಂದಿದೆ. ಕೌಶಲಾಭಿವೃದ್ಧಿ ಯೋಜನೆಗಳ ಮೂಲಕ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಸೃಷ್ಟಿಸುವುದು ನನ್ನ ಚುನಾವಣಾ ಪ್ರಣಾಳಿಕೆಯ ಮುಖ್ಯ ಅಂಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯರಾದ ವಿ.ಪಿ. ಗವಾಯಿ, ಈರಣ್ಣ ಮಡಿವಾಳರ, ಪಿ.ಆರ್. ಇನಾಂದಾರ ಉಪಸ್ಥಿತರಿದ್ದರು.

## ಕಾರ್ಪೋರೇಟ್ ಪರ ನೀತಿಗಳ ವಿರುದ್ಧ ಹೋರಾಟಕ್ಕೆ ಕರೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಚುನಾವಣೆ ವೇಳೆ ನೀಡಿದ ಭರವಸೆಗಳನ್ನು ಮರೆತು ಸರ್ಕಾರಗಳು ಜನವಿರೋಧಿ ಹಾಗೂ ಕಾರ್ಪೋರೇಟ್ ಪರ ನೀತಿಗಳನ್ನು ಜಾರಿಗೆ ತರುತ್ತಿವೆ ಎಂದು ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ ಆರೋಪಿಸಿದರು.

ನಗರದಲ್ಲಿ ಜಗಜ್ಯೋತಿ ಬಸವಣ್ಣನವರ ಜಯಂತಿ ಅಂಗವಾಗಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಆಯೋಜಿಸಿದ್ದ ಸ್ಲಂ ಜನರ ಸಮಸ್ಯೆಗಳು ಹಾಗೂ ಪರಿಹಾರಗಳ ಕುರಿತು ನಡೆದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಎಸ್‌ಐಆರ್ ಜಾರಿಗೆ ತರುವ ಮೂಲಕ ಮೂಲ ನಿವಾಸಿಗಳ ಸಂವಿಧಾನಬದ್ಧ ಮತದಾನದ ಹಕ್ಕಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದ ಅವರು, ರಾಜ್ಯ ಸರ್ಕಾರ ಜನರ ಕಲ್ಯಾಣಕ್ಕಿಂತ ಕಾರ್ಪೋರೇಟ್ ಹಿತಾಸಕ್ತಿಗೆ ಆದ್ಯತೆ ನೀಡುತ್ತಿದೆ ಎಂದು ಟೀಕಿಸಿದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ ಎಂದು ಹೇಳಿಕೊಳ್ಳುತ್ತಿದ್ದರೂ, ಅಭಿವೃದ್ಧಿ ಕಾಮಗಾರಿಗಳಿಗೆ ಸಮರ್ಪಕ ಅನುದಾನ ನೀಡಲಾಗಿಲ್ಲ. 2026-27ರ ಬಜೆಟ್‌ನಲ್ಲಿ ಕೊಳಗೇರಿ ಅಭಿವೃದ್ಧಿಗೆ 400 ಕೋಟಿ ರೂ. ಬೇಡಿಕೆ ಇಟ್ಟಿದ್ದರೂ ಕೇವಲ 30 ಕೋಟಿ ರೂ. ಮಾತ್ರ ಮೀಸಲಿರಿಸಿರುವುದು ಆತಂಕಕಾರಿ ಎಂದು ಹೇಳಿದರು.


ಬೆಲೆ ಏರಿಕೆಯಿಂದ ಬಡ ಮತ್ತು ಮಧ್ಯಮ ವರ್ಗದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಉಚಿತ ಮನೆಗಳ ಭರವಸೆ ನೀಡಿದ ಸರ್ಕಾರ, ಖಾಸಗಿ ಕಂಪನಿಗಳ ಮೂಲಕ ಮನೆ ನಿರ್ಮಾಣಕ್ಕೆ ಒತ್ತು ನೀಡಿ ಸ್ಲಂ ನಿವಾಸಿಗಳನ್ನು ಬಾಡಿಗೆದಾರರನ್ನಾಗಿ ಮಾಡುವ ಯೋಚನೆ ಮಾಡುತ್ತಿದೆ ಎಂದು ಆರೋಪಿಸಿದರು.

ಪ್ರಗತಿಪರ ಚಿಂತಕ ಬಸವರಾಜ ಪೂಜಾರ ಮಾತನಾಡಿ, ಸ್ಲಂ ಜನರ ಸಮಸ್ಯೆಗಳ ಪರಿಹಾರಕ್ಕೆ ಹೋರಾಟಗಳು ನಡೆದರೂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಫಲ ಸಿಗುತ್ತಿಲ್ಲ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ, ವಸತಿರಹಿತರಿಗೆ ಮನೆ ಹಂಚಿಕೆಯಲ್ಲಿ ಅನ್ಯಾಯವಾಗುತ್ತಿದೆ. ▸▸ 4ನೇ ಪುಟಕ್ಕೆ

### ಮಹಿಳಾ ಮೀಸಲಾತಿ ವಿಚಾರದಲ್ಲಿ ಕೇಂದ್ರ ಸರ್ಕಾರದ ಇಬ್ಬಗೆ ನೀತಿಗೆ ಅಶೋಕ ಮಂದಾಲಿ ವಾಗ್ದಾಳಿ

# ‘ನಾರಿ ಶಕ್ತಿ’ ಹೆಸರಿನಲ್ಲಿ ರಾಜಕೀಯ ಗಿಮಿಕ್!



> “ಮಹಿಳೆಯರ ನಿಜವಾದ ಸಬಲೀಕರಣಕ್ಕಾಗಿ ಕಾಂಗ್ರೆಸ್ ಸರ್ಕಾರಗಳು ಸದಾ ಬದ್ಧವಾಗಿದ್ದು, ಬಿಜೆಪಿ ಸರ್ಕಾರದ ನೀತಿಗಳು ಮಾತ್ರ ವಿಳಂಬ ಮತ್ತು ರಾಜಕೀಯ ಲಾಭಕ್ಕಾಗಿ ರೂಪಿತವಾಗಿವೆ,”
>
> – **ಅಶೋಕ ಮಂದಾಲಿ,** ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷರು.

> “2014 ಮತ್ತು 2019ರಲ್ಲಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದ್ದ ಬಿಜೆಪಿ, ಮಹಿಳೆಯರ ಬಗ್ಗೆ ನಿಜವಾದ ಕಾಳಜಿ ಹೊಂದಿದ್ದರೆ 2014ರಲ್ಲೇ ಮೀಸಲಾತಿ ಜಾರಿಗೆ ತರಬಹುದಿತ್ತು. ಈಗ ಚುನಾವಣೆಯ ಹೊತ್ತಿನಲ್ಲಿ ‘ನಾರಿ ಶಕ್ತಿ’ ನೆನಪಾಗಿರುವುದು ರಾಜಕೀಯ ಗಿಮಿಕ್ ಮಾತ್ರ,” ಎಂದು ಅಶೋಕ ಮಂದಾಲಿ ಹೇಳಿದ್ದಾರೆ.

**■ ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯ ಬಂದ ನಂತರ ಭಾರತದಲ್ಲಿ ಸಾಮಾಜಿಕ ಸಮಾನತೆ, ಸಾಮಾಜಿಕ ಪ್ರಾತಿನಿಧ್ಯ ಹಾಗೂ ಸಾಮಾಜಿಕ ಕಾಳಜಿಗಾಗಿ ನಿರಂತರವಾಗಿ ಶ್ರಮಿಸಿದ ಪಕ್ಷ ಕಾಂಗ್ರೆಸ್ ಮಾತ್ರ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು ಹಾಗೂ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜೀವ್ ಗಾಂಧಿ ನೇತೃತ್ವದ ಕಾಂಗ್ರೆಸ್ ಸರ್ಕಾರ ದೇಶದಲ್ಲೇ ಮೊದಲ ಬಾರಿ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಶೇ. 33ರಷ್ಟು ರಾಜಕೀಯ ಮೀಸಲಾತಿ ನೀಡಿದ ಪರಿಣಾಮವಾಗಿ ಇಂದಿಗೂ ದೇಶಾದ್ಯಂತ ಪಂಚಾಯತ್ ಮತ್ತು ನಗರಪಾಲಿಕೆಗಳಲ್ಲಿ ಲಕ್ಷಾಂತರ ಮಹಿಳೆಯರು ಪ್ರತಿನಿಧಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ವಿ“2026ರ ಎಪ್ರಿಲ್ 17ರಂದು ನಡೆದ ಲೋಕಸಭೆಯ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಮಸೂದೆ ಅಂಗೀಕಾರಕ್ಕೆ 352 ಮತಗಳ ಅವಶ್ಯಕತೆ ಇದ್ದರೂ ಪರವಾಗಿ 298 ಮತ್ತು ವಿರೋಧವಾಗಿ 230 ಮತಗಳು ಬಂದ ಹಿನ್ನೆಲೆಯಲ್ಲಿ 54 ಮತಗಳ ಅಂತರದಿಂದ ಮಸೂದೆ ಅಂಗೀಕಾರವಾಗಲಿಲ್ಲ,” ಎಂದು ಅವರು ▸▸ 2ನೇ ಪುಟಕ್ಕೆ

### ಸಂಸ್ಕಾರ-ಶಿಕ್ಷಣದಿಂದ ಸಾಧನೆಯ ಗುರಿ ತಲುಪಿದ ಮೇಗಲಮನಿ ಕುಟುಂಬದ ಯಶೋಗಾಥೆಗೆ ಪ್ರಶಂಸೆ

# ಯುವಕರಿಗೆ ಪ್ರೇರಣೆಯಾದ ಕುಟುಂಬದ ಸೇವೆ-ಸಾಧನೆ



> ಇಂದಿನ ಯುವಕರು ತಮ್ಮ ತಂದೆ-ತಾಯಿ ಕಷ್ಟಪಟ್ಟು ಗಳಿಸಿದ ಹಣದ ಮೌಲ್ಯವನ್ನು ಅರಿತು ಶ್ರಮಿಸಿದಾಗ ಮಾತ್ರ ಉನ್ನತ ಶಿಕ್ಷಣ ಪಡೆದು ಉತ್ತಮ ಉದ್ಯೋಗವನ್ನು ಪಡೆಯಲು ಸಾಧ್ಯ.
>
> **–ಜಿ. ಎಸ್. ಪಾಟೀಲ,** ಶಾಸಕ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಶಿಕ್ಷಣವೇ ಬದುಕಿನ ದೊಡ್ಡ ಶಕ್ತಿ. ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಶಿಕ್ಷಣದಿಂದಲೇ ಸಮಾಜದಲ್ಲಿ ಸಮಾನತೆ ಸಾಧ್ಯವೆಂದು ಹೇಳಿದ್ದರು. ಅದೇ ಮಾರ್ಗದಲ್ಲಿ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಉನ್ನತ ಸ್ಥಾನಗಳಿಗೆ ತಲುಪಿಸಿದ ರಾಮಣ್ಣ ಮೇಗಲಮನಿ ಕುಟುಂಬದ ಕಾರ್ಯ ನಿಜವಾಗಿಯೂ ಪ್ರಶಂಸನೀಯವಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಅತ್ತಿಕಟ್ಟಿ ತಾಂಡ ಗ್ರಾಮದಲ್ಲಿ ಮೇಗಲಮನಿ ಕುಟುಂಬದವರಿಂದ ಹಿರಿಯರಾದ ಸೋಮಪ್ಪ ಮತ್ತು ಫಕೀರಮ್ಮ ಸವಿ ನೆನಪಿಗಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ ಸನ್ಮಾನ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

“ಶಿಕ್ಷಣದಿಂದ ಮಾತ್ರ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯ. ರಾಮಣ್ಣ ಮೇಗಲಮನಿ ಅವರು ತಮ್ಮ ಮಕ್ಕಳಿಗೆ ಸಂಸ್ಕಾರ ಹಾಗೂ ಉನ್ನತ ಶಿಕ್ಷಣ ನೀಡಿದ್ದು, ಅವರು ಸರ್ಕಾರದಲ್ಲಿ ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿರುವುದು ಹೆಮ್ಮೆಯ ಸಂಗತಿ,” ಎಂದು ಹೇಳಿದರು.

“ಮೇಗಲಮನಿ ಕುಟುಂಬವು ಈ ಮೂಲಕ ಸಮಾಜಕ್ಕೆ ಆದರ್ಶ ಕುಟುಂಬವಾಗಿ ಮೂಡಿ ಬಂದಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗೂ ಈ ಕುಟುಂಬ ಪ್ರೇರಣೆಯಾಗಬೇಕು,” ಎಂದು ಅವರು ಅಭಿಪ್ರಾಯಪಟ್ಟರು.

ಮಾಜಿ ಸಚಿವ ಎಸ್.ಎಸ್. ಪಾಟೀಲ ಹಾಗೂ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಸಮಾಜದಲ್ಲಿ ಪ್ರಗತಿ ಸಾಧಿಸಲು ಶಿಕ್ಷಣವೇ ಪ್ರಮುಖ ಸಾಧನವಾಗಿದ್ದು, ಯುವಕರು ಶಿಕ್ಷಣದ ಮೂಲಕ ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಗದಗ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಮುಂಡರಗಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ ಮಾತನಾಡಿ, ▸▸ 3ನೇ ಪುಟಕ್ಕೆ

# 'ನಾರಿ ಶಕ್ತಿ' ಹೆಸರಿನಲ್ಲಿ ರಾಜಕೀಯ ಗಿಮಿಕ್!

▸▸ ಮೊದಲನೇ ಪುಟದಿಂದ

ವಿವರಿಸಿದರು. ಹಿ ಕಾಂಗ್ರೆಸ್ ಮಹಿಳಾ ಮೀಸಲಾತಿ ವಿರೋಧಿ ಎಂಬ ಆರೋಪವನ್ನು ಬಿಜೆಪಿ ಮಾಡುತ್ತಿರುವುದು ವಾಸ್ತವಕ್ಕೆ ದೂರವಾಗಿದ್ದು, 2023ರಲ್ಲಿ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಶೇ. 33ರಷ್ಟು ಮೀಸಲಾತಿ ನೀಡುವ 'ನಾರಿ ಶಕ್ತಿ ವಂದನ್ ಅಧಿನಿಯಮ' ಮಸೂದೆಗೆ ಕಾಂಗ್ರೆಸ್ ಪಕ್ಷದ ಎಲ್ಲಾ ಸಂಸದರು ಬೆಂಬಲ ನೀಡಿದ್ದರು ಎಂದು ಹೇಳಿದರು.

"ರಾಜ್ಯಸಭೆಯಲ್ಲಿ ಮಸೂದೆ ಅವಿರೋಧವಾಗಿ ಅಂಗೀಕಾರವಾಗಿದ್ದು, ಕಾಂಗ್ರೆಸ್‌ನ ಪ್ರತಿಯೊಬ್ಬ ಸದಸ್ಯರೂ ಬೆಂಬಲಿಸಿದ್ದಾರೆ. ಕಾಂಗ್ರೆಸ್ ವಿರೋಧಿಯಾಗಿದ್ದರೆ ಈ ಮಸೂದೆ ಪಾಸಾಗುತ್ತಿರಲಿಲ್ಲ," ಎಂದು ಸ್ಪಷ್ಟಪಡಿಸಿದರು.

ಇದೀಗ ಕೇಂದ್ರ ಸರ್ಕಾರ ಜನಗಣತಿ ಮತ್ತು ಕ್ಷೇತ್ರ ಮರುವಿಂಗಡಣೆ ಎಂಬ ಷರತ್ತುಗಳನ್ನು ಮುಂದಿಟ್ಟು ಮಹಿಳಾ ಮೀಸಲಾತಿಯನ್ನು 2029 ಅಥವಾ 2034ರವರೆಗೆ ಮುಂದೂಡುತ್ತಿರುವುದು ಮಹಿಳೆಯರಿಗೆ ನೀಡಿದ ಖಾಲಿ ಭರವಸೆಯಾಗಿದೆ ಎಂದು ಆರೋಪಿಸಿದರು.

ಹಿಂದಿನ ಕಾಂಗ್ರೆಸ್ ಸರ್ಕಾರಗಳು ಮಹಿಳಾ ಸಬಲೀಕರಣಕ್ಕಾಗಿ ಅನೇಕ ಐತಿಹಾಸಿಕ ನಿರ್ಧಾರಗಳನ್ನು ಕೈಗೊಂಡಿವೆ ಎಂದು ಅವರು ಸ್ಮರಿಸಿದರು.

1950ರಲ್ಲಿ ಸಂವಿಧಾನದ ಮೂಲಕ ಸಮಾನ ಹಕ್ಕುಗಳ ಭದ್ರತೆ, 1992–93ರಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ 33% ಮೀಸಲಾತಿ, 2005ರಲ್ಲಿ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ, 2013ರಲ್ಲಿ ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಸೇರಿದಂತೆ ಹಲವು ಪ್ರಮುಖ ಕ್ರಮಗಳನ್ನು ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದೆ ಎಂದು ವಿವರಿಸಿದರು.

ಅದೇ ರೀತಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಶಕ್ತಿ ಮತ್ತು ಗೃಹಲಕ್ಷ್ಮಿ ಯೋಜನೆಗಳು ಮಹಿಳೆಯರ ಆರ್ಥಿಕ ಹಾಗೂ ಸಾಮಾಜಿಕ ಸಬಲೀಕರಣಕ್ಕೆ ಮಹತ್ವದ ಪಾತ್ರವಹಿಸುತ್ತಿವೆ ಎಂದು ಹೇಳಿದರು.

# ನಾಡು–ನುಡಿ ಹೋರಾಟದ ದಿಕ್ಕು ತೋರಿದ ಶಿವಮೂರ್ತಿಸ್ವಾಮಿಗಳು

## ಅಳವಂಡಿ ಶಿವಮೂರ್ತಿಸ್ವಾಮಿಗಳ ಅಪಾರ ಕೊಡುಗೆಗೆ ಕಸಾಪ ವೇದಿಕೆಯಲ್ಲಿ ಗೌರವ ನಮನ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯ ಚಳವಳಿ, ಕರ್ನಾಟಕ ಏಕೀಕರಣ ಚಳವಳಿ ಹಾಗೂ ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟಗಳಲ್ಲಿ ಮುಂಚೂಣಿಯಲ್ಲಿ ನಿಂತು ಕನ್ನಡ ನಾಡು–ನುಡಿಗಾಗಿ ತಮ್ಮ ಬದುಕನ್ನೇ ಸಮರ್ಪಿಸಿದ ಮಹಾನ್ ಚೇತನ ಅಳವಂಡಿ ಶಿವಮೂರ್ತಿಸ್ವಾಮಿಗಳ ಕೊಡುಗೆ ಅಪಾರವಾಗಿದೆ ಎಂದು ಅನ್ನದಾನಿ ಹಿರೇಮಠ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಗದುಗಿನ ಜಗದ್ಗುರು ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ವೇದಮೂರ್ತಿ ಅಳವಂಡಿ ಶಿವಮೂರ್ತಿಸ್ವಾಮಿಗಳ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಕರ್ನಾಟಕ ಏಕೀಕರಣ ಚಳವಳಿ ಮತ್ತು ಅಳವಂಡಿ ಶಿವಮೂರ್ತಿಸ್ವಾಮಿಗಳು' ವಿಷಯವಾಗಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

"ಭಾಷಾವಾರು ಪ್ರಾಂತ ರಚನೆಯ ಸಂದರ್ಭದಲ್ಲಿ ಬಳ್ಳಾರಿ ಭಾಗದ ಅನೇಕ ಪ್ರದೇಶಗಳನ್ನು ಆಂಧ್ರಕ್ಕೆ ಸೇರಿಸುವ ಪ್ರಸ್ತಾಪಕ್ಕೆ ವಿರೋಧವಾಗಿ ತೀವ್ರ ಹೋರಾಟ ನಡೆಸಿದ ಪರಿಣಾಮ ಇಂದು ತುಂಗಭದ್ರಾ ಅಣೆಕಟ್ಟನ್ನು ಕರ್ನಾಟಕದ ಭಾಗವಾಗಿ ಉಳಿಸಿಕೊಳ್ಳಲು ಸಾಧ್ಯವಾಯಿತು. ಮುಂಡರಗಿಯಲ್ಲಿ ಸ್ವಯಂಸೇವಕ ಸತ್ಯಾಗ್ರಹ ಶಿಬಿರ ಸಂಘಟಿಸಿ ರಜಾಕರರಿಗೆ ಸಿಂಹಸ್ವಪ್ನರಾದರು. ಶಿಕ್ಷಣದ ಮಹತ್ವವನ್ನು ಅರಿತು ಹಲವು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಕನ್ನಡ ನಾಡಿನ ಉನ್ನತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ," ಎಂದು ಅವರು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಿವಮೂರ್ತಿಸ್ವಾಮಿಗಳು ತಮ್ಮ ವಾಕ್ಪಟುತ್ವದಿಂದ ರಾಜ್ಯ ಮತ್ತು ರಾಷ್ಟ್ರದ ಸಮಸ್ಯೆಗಳ ಬಗ್ಗೆ ಪರಿಣಾಮಕಾರಿಯಾಗಿ ಮಾತನಾಡಿ ಸರ್ಕಾರದ ಗಮನ ಸೆಳೆದ ತತ್ವನಿಷ್ಠ ನಾಯಕರು ಎಂದು ಹೇಳಿದರು.

"ಇಂದಿನ ಸಮಸ್ಯೆಗಳಿಗೆ ಹೋರಾಟದ ಮೂಲಕವೇ ಪರಿಹಾರ ಕಂಡುಕೊಳ್ಳಬೇಕಿದ್ದು, ಈ ನಿಟ್ಟಿನಲ್ಲಿ ಶಿವಮೂರ್ತಿಸ್ವಾಮಿಗಳು ನಮಗೆ ಆದರ್ಶ," ಎಂದು ಅವರು ಹೇಳಿದರು.

ಪ್ರಾಚಾರ್ಯ ಡಾ. ಬಿ.ಬಿ. ಹೊಳಗುಂದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುಳಾ ವೆಂಕಟೇಶಯ್ಯ ಕವನ ವಾಚಿಸಿದರು. ವೇದಿಕೆಯಲ್ಲಿ ಕ.ವಿ.ವ. ಸಮಿತಿ ಕಾರ್ಯದರ್ಶಿ ಶ್ರೀಮತಿ ವಿ.ಆರ್. ಕಟ್ಟಿಮನಿ ಹಿರೇಮಠ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕರಾದ ಡಾ. ಎಂ.ಎಸ್. ಶಿರೋಳ, ಡಾ. ಶಿಲ್ಪಾ ಹಿರೇಕೇರೂರ, ಡಾ. ಬಸವರಾಜ ಎಂ.ಎಚ್., ಡಾ. ಎಸ್.ಎಂ. ರಾಯನಗೌಡರ, ಡಾ. ಬಿ.ಪಿ. ಲಮಾಣಿ, ರೇಖಾ ಕಿತ್ತೂರ, ಶಿವಾನಂದ ಜಟ್ಟೆಣ್ಣವರ, ಟಿ.ಎಫ್. ನದಾಫ್, ಎಂ.ಎಲ್. ಬೆಳಧಡಿ ಹಾಗೂ ಬಿ.ಎಡ್. ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ತಡೆಗೆ ಸ್ಪಂದನ ಸಂಸ್ಥೆಯ ಜಾಗೃತಿ ಆಂದೋಲನ

■ ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷಯ ತೃತೀಯ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟುವ ಉದ್ದೇಶದಿಂದ ಸ್ಪಂದನ ಅಸೋಸಿಯೇಷನ್ ಸ್ವಯಂಸೇವಾ ಸಂಸ್ಥೆಯ ಗದಗ ಘಟಕವು ಜಿಲ್ಲಾಡಳಿತದ ಸಹಯೋಗದಲ್ಲಿ ಜಾಗೃತಿ ಆಂದೋಲನ ಹಮ್ಮಿಕೊಂಡಿತು.

ಮೂಲತಃ ಬೆಳಗಾವಿಯ ಸಂಸ್ಥೆಯಾಗಿರುವ ಸ್ಪಂದನ, ಗದಗ ಜಿಲ್ಲೆಯಲ್ಲಿ ತನ್ನ ಘಟಕದ ಮೂಲಕ ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಬಾಲ್ಯ ವಿವಾಹ ನಿರ್ಮೂಲನೆಗಾಗಿ ಕಾರ್ಯನಿರ್ವಹಿಸುತ್ತಿದೆ. ಈ ಅಭಿಯಾನದಲ್ಲಿ ಬಾಲ್ಯ ವಿವಾಹ ನಿಷೇಧಾಧಿಕಾರಿಗಳು (ಸಿಎಂಪಿಓಗಳು) ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿ, ಜಿಲ್ಲೆಯಾದ್ಯಂತ ಬಾಲ್ಯ ವಿವಾಹ ತಡೆಗಟ್ಟಲು ತಮ್ಮ ಬದ್ಧತೆಯನ್ನು ವ್ಯಕ್ತಪಡಿಸಿ ಪ್ರತಿಜ್ಞೆ ಕೈಗೊಂಡರು.

ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತಗೊಳಿಸುವ ಗುರಿಯೊಂದಿಗೆ ಸಂಸ್ಥೆ ಶಾಲೆಗಳು, ಗ್ರಾಮ ಪಂಚಾಯಿತಿಗಳು ಹಾಗೂ ಹಳ್ಳಿಗಳಲ್ಲಿ ಜಿಲ್ಲಾಡಳಿತ, ಶಿಕ್ಷಣ ಸಂಸ್ಥೆಗಳು ಮತ್ತು ಧಾರ್ಮಿಕ ಮುಖಂಡರ ಸಹಕಾರದಿಂದ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಇದುವರೆಗೆ ಸಾವಿರಾರು ಜನರಿಗೆ




ಬಾಲ್ಯ ವಿವಾಹ ವಿರೋಧಿ ಪ್ರಮಾಣ ವಚನ ಬೋಧಿಸಲಾಗಿದೆ.

ವಿವಾಹಗಳ ಸೀಸನ್ ಆರಂಭವಾಗುವ ಅಕ್ಷಯ ತೃತೀಯ ದಂತಹ ಸಂದರ್ಭಗಳಲ್ಲಿ ವಿಶೇಷವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸಂಸ್ಥೆ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ದೇಶಾದ್ಯಂತ ಕಾರ್ಯನಿರ್ವಹಿಸುತ್ತಿರುವ "ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್" ಜಾಲದ ಪಾಲುದಾರವಾಗಿದೆ.

ಸಂಸ್ಥೆಯ ನಿರ್ದೇಶಕರಾದ ವಿ. ಸುಶೀಲ ಮಾತನಾಡಿ, "ಬಾಲ್ಯ ವಿವಾಹವು ಘೋರ ಅಪರಾಧವಾಗಿದ್ದು, ಯಾವುದೇ ಧಾರ್ಮಿಕ ಅಥವಾ ಸಾಂಪ್ರದಾಯಿಕ ನೆಪದಲ್ಲಿಯೂ ಇದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಆಡಳಿತ ಮತ್ತು ಸಾಮಾಜಿಕ ಸಂಸ್ಥೆಗಳ ಜಾಗೃತಿಯಿಂದ ಈಗ ಬಾಲ್ಯ ವಿವಾಹಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಿದೆ. ಆದರೆ ಈ ಪದ್ಧತಿಯನ್ನು ಸಂಪೂರ್ಣ ನಿರ್ಮೂಲನೆ ಮಾಡಬೇಕಾಗಿದೆ," ಎಂದು ಹೇಳಿದರು.

"ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಅಡಿಯಲ್ಲಿ ಇಂತಹ ವಿವಾಹಗಳಲ್ಲಿ ಭಾಗವಹಿಸುವವರಷ್ಟೇ ಅಲ್ಲದೆ, ಮದುವೆಗೆ ಸಂಬಂಧಿಸಿದ ಸೇವೆಗಳನ್ನು ಒದಗಿಸುವವರಿಗೂ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ, ದಂಡ ಅಥವಾ ಎರಡನ್ನೂ ವಿಧಿಸುವ ಅವಕಾಶವಿದೆ. ಕ್ಯಾಟರಿಂಗ್, ಡೆಕೋರೇಟರ್‌ಗಳು, ಮಿಠಾಯಿ ತಯಾರಕರು, ಹೂಗಾರರು, ಬ್ಯಾಂಡ್ ವಾದಕರು, ಕಲ್ಯಾಣ ಮಂಟಪದ ಮಾಲೀಕರು ಹಾಗೂ ಮದುವೆ ನಡೆಸುವ ಅರ್ಚಕರು ಅಥವಾ ಮೌಲ್ವಿಗಳು ಸಹ ಅಪರಾಧಿಗಳೆಂದು ಪರಿಗಣಿಸಲಾಗುತ್ತದೆ," ಎಂದು ತಿಳಿಸಿದರು.

ತಳಮಟ್ಟದಲ್ಲಿ ನಡೆದ ನಿರಂತರ ಜಾಗೃತಿ ಅಭಿಯಾನಗಳ ಪರಿಣಾಮವಾಗಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳಲ್ಲಿ ಇಳಿಕೆ ಕಂಡುಬಂದಿದ್ದು, ಜನರು ಈಗ ಇಂತಹ ಘಟನೆಗಳನ್ನು ತಕ್ಷಣ ವರದಿ ಮಾಡುತ್ತಿದ್ದಾರೆ. 2030ರೊಳಗೆ ಗದಗ ಜಿಲ್ಲೆಯನ್ನು ಸಂಪೂರ್ಣ ಬಾಲ್ಯ ವಿವಾಹ ಮುಕ್ತಗೊಳಿಸುವ ಗುರಿ ಸಾಧಿಸಲಾಗುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

"ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್" ಜಾಲವು ತನ್ನ 250ಕ್ಕೂ ಹೆಚ್ಚು ಪಾಲುದಾರ ಸಂಸ್ಥೆಗಳೊಂದಿಗೆ ದೇಶದ 450ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಬಾಲ್ಯ ವಿವಾಹ ವಿರೋಧಿ ಅಭಿಯಾನ ನಡೆಸುತ್ತಿದ್ದು, ಇದುವರೆಗೆ ಐದು ಲಕ್ಷಕ್ಕೂ ಹೆಚ್ಚು ಬಾಲ್ಯ ವಿವಾಹಗಳನ್ನು ತಡೆಗಟ್ಟುವಲ್ಲಿ ಯಶಸ್ವಿಯಾಗಿದೆ.

# ಸಮಸಮಾಜ ನಿರ್ಮಾಣಕ್ಕೆ ಬಸವಣ್ಣನವರ ತತ್ವಗಳು ದಾರಿದೀಪ

## ಹೂವಿನ ಶಿಗ್ಲಿ ವಿರಕ್ತಮಠದಲ್ಲಿ ಬಸವ ಜಯಂತಿ ಆಚರಣೆಯಲ್ಲಿ ಚನ್ನವೀರ ಮಹಾಸ್ವಾಮಿಗಳು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶ್ವಕ್ಕೆ ಸಮಾನತೆಯ ಸಂದೇಶ ಸಾರಿದ ಮಾನವತಾವಾದಿ ಬಸವಣ್ಣನವರು ಸಮಸಮಾಜ ನಿರ್ಮಾಣಕ್ಕೆ ಶ್ರಮಿಸಿ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಿದರು ಎಂದು ಹೂವಿನ ಶಿಗ್ಲಿ ವಿರಕ್ತಮಠದ ಪಟ್ಟಾಧ್ಯಕ್ಷರಾದ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಸೋಮವಾರ ಬಸವ ಜಯಂತಿ ಅಂಗವಾಗಿ ಶ್ರೀಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದುಡಿಮೆಯೇ ನಿಜವಾದ ಪೂಜೆ ಎಂದು ಸಾರಿದ ಬಸವಣ್ಣನವರು 'ಕಾಯಕವೇ ಕೈಲಾಸ' ಎಂಬ ತತ್ವದ ಮೂಲಕ ಕಾಯಕದ ಮಹತ್ವವನ್ನು ಎತ್ತಿಹಿಡಿದರು ಎಂದರು.

> "ಸಮಸಮಾಜ ನಿರ್ಮಾಣಕ್ಕೆ ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯಕ."
> – **ಚನ್ನವೀರ ಮಹಾಸ್ವಾಮಿಗಳು**, ಪಟ್ಟಾಧ್ಯಕ್ಷರು, ಹೂವಿನ ಶಿಗ್ಲಿ ವಿರಕ್ತಮಠ

ಸಮಾಜದಲ್ಲಿ ಎಲ್ಲರೂ ಒಂದೇ ಎಂಬ ವಿಶ್ವಮಾನವತೆಯ ಸಂದೇಶವನ್ನು ಸಾರಿದ ಬಸವಣ್ಣನವರು ಮಹಾನ್ ಮಾನವತಾವಾದಿಯಾಗಿದ್ದು, ಅವರ ತತ್ವ ಸಿದ್ಧಾಂತಗಳು ಸಾರ್ವಕಾಲಿಕವಾಗಿವೆ. ಅವರ ವಚನಗಳು ಇಂದಿಗೂ ಪ್ರಸ್ತುತವಾಗಿದ್ದು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಾತ್ವಿಕ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀಮಠದ ಭಕ್ತ ಮಂಡಳಿ, ಶಿಕ್ಷಕರು ಹಾಗೂ ಗುರುಕುಲದ ಮಕ್ಕಳು ಉಪಸ್ಥಿತರಿದ್ದರು.

ಬಸವ ಜಯಂತಿ ಹಿನ್ನಲೆಯಲ್ಲಿ ಪಟ್ಟಣದ ತಾಪಂ ಕಾರ್ಯಾಲಯ, ಪುರಸಭೆ, ಕೆಎಸ್‌ಆರ್‌ಟಿಸಿ ಡಿಪೋ, ಹೆಸ್ಕಾಂ ಕಚೇರಿ, ನೋಂದಣಾಧಿಕಾರಿಗಳ ಕಾರ್ಯಾಲಯ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ಶಾಲಾ–ಕಾಲೇಜುಗಳಲ್ಲಿ ಬಸವ ಜಯಂತಿ ಆಚರಿಸಲಾಯಿತು.

ತಾಲೂಕಿನ ಶಿಗ್ಲಿ, ಸೂರಣಗಿ, ಯತ್ತಿನಹಳ್ಳಿ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಬಸವೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಅಪಾರ ಭಕ್ತ ಸಮೂಹದೊಂದಿಗೆ ಅದ್ದೂರಿ ರಥೋತ್ಸವಗಳು ಜರುಗಿದವು.

# 'ದಯವೇ ಧರ್ಮದ ಮೂಲ' ಎಂದು ಸಾರಿದ ಬಸವಣ್ಣ

## ಡಂಬಳದಲ್ಲಿ ಬಸವ ಜಯಂತಿ ಆಚರಣೆಯಲ್ಲಿ ಸಿದ್ಧಣ್ಣ ನಂಜಪ್ಪನವರ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಬಸವಣ್ಣನವರು 'ದಯವೇ ಧರ್ಮದ ಮೂಲ' ಎಂಬ ಮಹತ್ವದ ಸಂದೇಶವನ್ನು ನೀಡಿದ್ದು, ಅದನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಸಿದ್ಧಣ್ಣ ನಂಜಪ್ಪನವರ ಹೇಳಿದರು.

ಗ್ರಾಮದ ವೀರಭದ್ರೇಶ್ವರ ದೇವಸ್ಥಾನದಲ್ಲಿ ಆಯೋಜಿಸಿದ್ದ ವಿಶ್ವಗುರು ಬಸವೇಶ್ವರರ 893ನೇ ಜಯಂತಿ ಉತ್ಸವದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಬಸವಣ್ಣನವರ ವಚನಗಳಲ್ಲಿ ಸಾಮಾಜಿಕ ಚಿಂತನೆ ಪ್ರಮುಖವಾಗಿದ್ದು, ದಯೆ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಉತ್ತೇಜಿಸುವ ಸಂದೇಶಗಳನ್ನು ನೀಡಲಾಗಿದೆ. ಈ ಉದಾತ್ತ ಚಿಂತನೆಗಳನ್ನು ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರವರಲ್ಲಿಯೂ ಕಾಣಬಹುದು ಎಂದು ಹೇಳಿದರು.

> "ಬಸವಣ್ಣನವರು 'ದಯವೇ ಧರ್ಮದ ಮೂಲ' ಎಂಬ ಸಂದೇಶವನ್ನು ನೀಡಿದ್ದಾರೆ. ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ."
> – **ಸಿದ್ಧಣ್ಣ ನಂಜಪ್ಪನವರ**, ಅಧ್ಯಕ್ಷರು, ವೀರಶೈವ ಲಿಂಗಾಯತ ಸಮಾಜ


ಹಿರಿಯರಾದ ರುದ್ರಪ್ಪ ಕೊರ್ಲಗಟ್ಟಿ ಹಾಗೂ ಗೌಸಿದ್ದಪ್ಪ ಹಳ್ಳಾಕಾರ ಮಾತನಾಡಿ, ಬಸವಣ್ಣನವರು ಮಾನವೀಯ ಮೌಲ್ಯಗಳ ಆಧಾರದ ಮೇಲೆ ಸಮಾಜವನ್ನು ರೂಪಿಸಲು ಪ್ರಯತ್ನಿಸಿದ್ದು, ಅನಿಷ್ಟ ಪದ್ಧತಿಗಳ ನಿರ್ಮೂಲನೆಗೆ ಮುಂಚೂಣಿಯಾಗಿದ್ದಾರೆ ಎಂದರು. ವ್ಯಕ್ತಿ ಅಥವಾ ಜಾತಿ–ಗಿಂತ ಮಾನವೀಯತೆ ಮುಖ್ಯ ಎಂಬ ಸಂದೇಶವನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಮೂರ್ತಿ ರಾಜಶೇಖರಯ್ಯ ಹಿರೇಮಠ, ಸೋಮಣ್ಣ ಗುಡ್ಡದ, ರಾಜಪ್ಪ ಪಟ್ಟಣಶೆಟ್ಟರ, ಬಾಬು ವಂಡಕರ, ಶೇಖಪ್ಪ ಬುಗಟಿ, ಈಶಣ್ಣ ಪಟ್ಟಣಶೆಟ್ಟರ, ಅಂದಾನಪ್ಪ ಯಳಮಲ್ಲಿ, ಚಂದ್ರಪ್ಪ ನಂಜಪ್ಪನವರ, ಯಂಕಣ್ಣ ಗಡಗಿ, ಪ್ರಭು ಗಾಣಿಗೇರ, ಮುತ್ತಪ್ಪ ಹೂಗಾರ, ಈರಣ್ಣ ನಂಜಪ್ಪನವರ, ಸಂಗು ಬುಗಟಿ, ಅಜ್ಜಪ್ಪ ಕಾಡಸಿದ್ದೇಶ್ವರಮಠ, ಹನಮಂತ ಮಹೇದ್ರಕರ, ಮಲ್ಲಪ್ಪ ರೇವಡಿ, ಗೌಸಿದ್ದಪ್ಪ ಮಠದ, ಈರಣ್ಣ ಕೊಟ್ಟರಶೆಟ್ಟರ, ಮಂಜು ಬಂಗಾರಶೆಟ್ಟರ, ಈರಣ್ಣ ಕರವೀರಮಠ, ಉಮೇಶ ಕೊತಬಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಎಸ್‌ಐಆರ್ ವಿರೋಧಿ ಸಮಾವೇಶಕ್ಕೆ ವೆಲ್ಫೇರ್ ಪಾರ್ಟಿ ಬೆಂಬಲ

## ಎಪ್ರಿಲ್ 23ರಂದು ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ



- *) ಎಸ್‌ಐಆರ್ ಪ್ರಕ್ರಿಯೆ: ಪ್ರಮುಖ ಅಂಶಗಳು
- *) 12 ರಾಜ್ಯಗಳಲ್ಲಿ 6.5 ಕೋಟಿ ಮತದಾರರ ಹೆಸರು ತೆರವು ಆರೋಪ
- *) ಮುಂದಿನ ಹಂತದಲ್ಲಿ 6–8 ಕೋಟಿ ಹೆಸರುಗಳು ಹೊರಗುಳಿಯುವ ಆತಂಕ
- *) ಅಲ್ಪಸಂಖ್ಯಾತರು, ಹಿಂದುಳಿದವರು ಹೆಚ್ಚು ಪರಿಣಾಮ
- *) ಕೆಲವು ಕ್ಷೇತ್ರಗಳಲ್ಲಿ ಮುಸ್ಲಿಂ ಮತದಾರರ ಪ್ರಮಾಣ ಅತಿಯಾಗಿ "ಅಡ್ಜುಡಿಕೇಶನ್" ಪಟ್ಟಿಯಲ್ಲಿ.

> "ಲಕ್ಷಾಂತರ ಮತದಾರರನ್ನು ಹೊರಗಿಟ್ಟು ಚುನಾವಣೆ ನಡೆಸುವುದು ಪ್ರಜಾಪ್ರಭುತ್ವದ ಕಗ್ಗೊಲೆ. ಈ ಅನ್ಯಾಯದ ವಿರುದ್ಧ ಎಲ್ಲರೂ ಒಗ್ಗೂಡಿ ಹೋರಾಡಬೇಕು."
> – **ಅಡ್ವೊಕೇಟ್ ತಾಹೇರ್ ಹುಸೇನ್**, ರಾಜ್ಯಾಧ್ಯಕ್ಷ, ವೆಲ್ಫೇರ್ ಪಾರ್ಟಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪಶ್ಚಿಮ ಬಂಗಾಳದಲ್ಲಿ ನಡೆಯಲಿರುವ ವಿಧಾನಸಭೆ ಚುನಾವಣೆಯಲ್ಲಿ ಲಕ್ಷಾಂತರ ಮತದಾರರನ್ನು ಹೊರಗಿಟ್ಟು ಚುನಾವಣೆ ನಡೆಸುತ್ತಿರುವುದನ್ನು ಖಂಡಿಸಿ, ಎಪ್ರಿಲ್ 23ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಬೃಹತ್ ಪ್ರತಿಭಟನೆಗೆ ವೆಲ್ಫೇರ್ ಪಾರ್ಟಿ ಸಂಪೂರ್ಣ ಬೆಂಬಲ ಘೋಷಿಸಿದೆ.

ವೆಲ್ಫೇರ್ ಪಾರ್ಟಿ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್ ಅವರು ಪ್ರಕಟಣೆಯಲ್ಲಿ ಈ ವಿಷಯವನ್ನು ತಿಳಿಸಿ, ಸುಮಾರು 34 ಲಕ್ಷ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡಲಾಗುತ್ತಿದೆ ಎಂದು ಆರೋಪಿಸಿದರು. ಇದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಡಿ ಈಗಾಗಲೇ ಹನ್ನೆರಡು ರಾಜ್ಯಗಳಲ್ಲಿ ಸುಮಾರು 6.5 ಕೋಟಿ ಮತದಾರರ ಹೆಸರುಗಳನ್ನು ತೆರವುಗೊಳಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ 6ರಿಂದ 8 ಕೋಟಿ ಮತದಾರರು ಹೊರಗುಳಿಯುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಪ್ರಕ್ರಿಯೆಯಿಂದ ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರು ಹೆಚ್ಚಾಗಿ ತಮ್ಮ ಸಂವಿಧಾನಿಕ ಹಕ್ಕುಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಹೇಳಿದರು. ಪಶ್ಚಿಮ ಬಂಗಾಳದ ಮಣಿಕ್‌ಚಕ್, ಮೊಥಾಬಾರಿ ಹಾಗೂ ಸಂಶೇರ್ಗಂಜ್ ಕ್ಷೇತ್ರಗಳ ಅಂಕಿಅಂಶಗಳನ್ನು ಉಲ್ಲೇಖಿಸಿದ ಅವರು, "ಅಡ್ಜುಡಿಕೇಶನ್ ಅಡಿಯಲ್ಲಿ" ಸೇರಿಸಲ್ಪಟ್ಟವರಲ್ಲಿ ಬಹುಪಾಲು ಮುಸ್ಲಿಂ ಮತದಾರರೇ ಇದ್ದಾರೆ ಎಂದು ತಿಳಿಸಿದರು. ಒಟ್ಟಾರೆ ಮುಸ್ಲಿಂ ಮತದಾರರ ಪ್ರಮಾಣ 51.7% ಇದ್ದರೂ, ಅನುಮಾನಾಸ್ಪದ ಪಟ್ಟಿಯಲ್ಲಿ ಅವರ ಪ್ರಮಾಣ 92.6% ಇದೆ ಎಂದು ಹೇಳಿದರು.

ಮುಸ್ಲಿಂ ಮತದಾರರ ಅಡ್ಜುಡಿಕೇಶನ್ ದರ 42.2% ಆಗಿದ್ದರೆ, ಹಿಂದೂ ಮತದಾರರದು ಕೇವಲ 3.5% ಮಾತ್ರವಾಗಿದೆ ಎಂದು ಅವರು ಹೇಳಿದರು. ಈ ಅಂಕಿಅಂಶಗಳು ಪ್ರಕ್ರಿಯೆಯಲ್ಲಿ ಗಂಭೀರ ಅಸಮತೋಲನವನ್ನು ತೋರಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ದೇಶದ ವಿವಿಧ ರಾಜ್ಯಗಳಲ್ಲಿ ಅಲ್ಪಸಂಖ್ಯಾತ ಮತದಾರರು ತಮ್ಮ ಮತದಾನದ ಹಕ್ಕು ಕಳೆದುಕೊಳ್ಳುತ್ತಿರುವುದು ಚಿಂತಾಜನಕ ವಿಷಯವಾಗಿದ್ದು, ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ಈ ಪ್ರಕ್ರಿಯೆಯನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಈ ಹಿನ್ನೆಲೆಯಲ್ಲಿ ಎಪ್ರಿಲ್ 23ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ವೆಲ್ಫೇರ್ ಪಾರ್ಟಿ ಸಕ್ರಿಯವಾಗಿ ಭಾಗವಹಿಸಲಿದೆ ಎಂದು ತಿಳಿಸಿದ್ದಾರೆ.

## ಕೃಷ್ಣಗೌಡ ಎಚ್. ಪಾಟೀಲ್ ಜನ್ಮದಿನ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಜನಮನದಲ್ಲಿ ಗೌರವದ ಸ್ಥಾನ ಪಡೆದಿರುವ ಯುವ ನಾಯಕ ಕೃಷ್ಣಗೌಡ ಎಚ್. ಪಾಟೀಲ್ ಅವರ ಜನ್ಮದಿನವನ್ನು ವಿವಿಧ ಸಂಘಟನೆಗಳ ವತಿಯಿಂದ ಅದ್ದೂರಿಯಾಗಿ ಆಚರಿಸಲಾಯಿತು.

ಗದಗ ಜಿಲ್ಲೆಯ ತಟ್ಟಿ ಅಂಗವಿಕಲರ ಸೇವಾ ಸಂಸ್ಥೆ ಹಾಗೂ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರ ಸಂಘದ ಜಿಲ್ಲಾ ಘಟಕದ ವತಿಯಿಂದ ಕೃಷ್ಣಗೌಡ ಎಚ್. ಪಾಟೀಲ್ ಅವರನ್ನು ಸನ್ಮಾನಿಸಿ ಹೃತ್ಪೂರ್ವಕವಾಗಿ ಜನ್ಮದಿನದ ಶುಭಾಶಯಗಳನ್ನು ತಿಳಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಸರಳತೆ, ಸಜ್ಜನಿಕೆ ಮತ್ತು ಜನಪರ ಚಿಂತನೆಗಳ ಮೂಲಕ ಎಲ್ಲರ ಮನಗೆದ್ದಿರುವ ಕೃಷ್ಣಗೌಡ ಎಚ್. ಪಾಟೀಲ್ ಅವರು ಮುಂದಿನ ದಿನಗಳಲ್ಲಿ ರಾಜ್ಯ ಮತ್ತು ದೇಶದ ಉನ್ನತ ಸ್ಥಾನಮಾನಗಳನ್ನು ಅಲಂಕರಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಉಮೇಶ್ ಹಿರೇಮಠ್, ಸಿ.ಎಂ.ಕೆ. ಲಮಾಣಿ, ಬುದಪ್ಪ ಅಂಗಡಿ, ಎನ್.ಬಿ. ನಿಂಗನಗೌಡ, ಗಿರೀಶ್ ನರಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಹಿರಿಯರಾದ ಅಶೋಕ್ ಮಂದಾಲಿ, ಸುರೇಶ್ ಕಟ್ಟಿಮನಿ, ಹಾಲೇಶ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಶುಭಾಶಯ ಕೋರಿದರು.

# ಶಂಕರಾಚಾರ್ಯರ ತತ್ವಗಳು ಸರ್ವಕಾಲಿಕ ಪ್ರಸ್ತುತ

### ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಆಚರಣೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್



> "ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಸಂಚರಿಸಿ ಧರ್ಮ ರಕ್ಷಣೆಗಾಗಿ ಶ್ರಮಿಸಿದ ಶಂಕರಾಚಾರ್ಯರು 'ಅಹಂ ಬ್ರಹ್ಮಾಸ್ಮಿ' ಎಂಬ ತತ್ವವನ್ನು ಪ್ರತಿಪಾದಿಸಿ ಲೋಕ ಕಲ್ಯಾಣಕ್ಕೆ ಕೊಡುಗೆ ನೀಡಿದ್ದಾರೆ."
> – **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ಆದಿ ಶಂಕರಾಚಾರ್ಯರು ಸನಾತನ ಧರ್ಮದ ಉಳಿವಿಗೆ ಕಾರಣರಾದ ಮಹಾನ್ ಚೇತನರಾಗಿದ್ದು, ಅವರ ತತ್ವಗಳು ಸರ್ವಕಾಲದಲ್ಲಿಯೂ ಪ್ರಸ್ತುತವಾಗಿವೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಸಂಬಾಪುರ ರಸ್ತೆಯ ಶ್ರೀ ಶಂಕರ ಮಠದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಂಗಳವಾರ ನಡೆದ ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಂಕರಾಚಾರ್ಯರು 8ನೇ ಶತಮಾನದಲ್ಲಿ ಸನಾತನ ಸಂಸ್ಕೃತಿ ವಿನಾಶದ ಅಂಚಿನಲ್ಲಿದ್ದ ಸಂದರ್ಭದಲ್ಲಿ ಅದನ್ನು ಪುನರ್‌ಸ್ಥಾಪಿಸಿದ ಮಹಾನ್ ವ್ಯಕ್ತಿ. ಸನಾತನ ಧರ್ಮವು ಜೀವನ ಶೈಲಿಯಾಗಿದ್ದು, ಆರೋಗ್ಯ ಮತ್ತು ನೆಮ್ಮದಿ ಇದ್ದರೆ ಜೀವನದಲ್ಲಿ ಸಾಧನೆ ಸಾಧ್ಯವೆಂದು ಅವರು ತಿಳಿಸಿದರು.

ಹಿರಿಯ ಅಭಿವೃದ್ಧಿ ಅಧಿಕಾರಿ ಹಾಗೂ ಸಂಸ್ಕೃತಿ ಚಿಂತಕರಾದ ಎಂ.ಟಿ. ಭಟ್ ಉಪನ್ಯಾಸ ನೀಡಿ, ಶಂಕರಾಚಾರ್ಯರು ಕೇರಳದಲ್ಲಿ ವೈಶಾಖ ಶುದ್ಧ ಪಂಚಮಿಯಂದು ಜನಿಸಿದರು. ಆತ್ಮ ಮತ್ತು ಪರಮಾತ್ಮ ಒಂದೇ ಎಂಬ ಅದ್ವೈತ ವೇದಾಂತ ತತ್ವವನ್ನು ಅವರು ಪ್ರತಿಪಾದಿಸಿದರು. ಸನಾತನ ಧರ್ಮದ ಉಳಿವಿಗಾಗಿ ದೇಶದ ನಾಲ್ಕು ದಿಕ್ಕುಗಳಲ್ಲಿ ಕಾಲ್ನಡಿಗೆಯಲ್ಲಿ ಸಂಚರಿಸಿ ಅಪಾರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ರಾಮಚಂದ್ರ ಮೋನೆ ಪ್ರಾಸ್ತಾವಿಕವಾಗಿ ಮಾತನಾಡಿ, ಜಗದ್ಗುರು ಆದಿ ಶಂಕರಾಚಾರ್ಯರು ತತ್ವಜ್ಞಾನಿಗಳಲ್ಲಿಯೇ ಮೇರು ಶಿಖರವಾಗಿದ್ದು, ಅವರ ಅದ್ವೈತ ತತ್ವಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಾಜದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಹಾಗೂ ಹಿರಿಯರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ವೇದಮೂರ್ತಿ ರತ್ನಾಕರ್ ಭಟ್ ಜೋಶಿ, ಡಾ. ಕುಶಾಲ ಗೋಡಖಿಂಡಿ, ಆನಂದ ಗೋಡಖಿಂಡಿ, ದತ್ತಾತ್ರೇಯ ಜೋಶಿ, ಸುಮನ ಪಾಟೀಲ, ವೆಂಕಟೇಶ ಕುಲಕರ್ಣಿ, ಗಿರೀಶ ಕುಲಕರ್ಣಿ, ಸುಧೀಂದ್ರ ದೇಶಪಾಂಡೆ, ದತ್ತಣ್ಣ ಜೋಶಿ, ಗಿರೀಶ ಪಂತರ, ಅನಿಲ ತೆಂಬದಮನಿ, ರವೀಂದ್ರ ಜೋಶಿ, ಆರ್.ಎಸ್. ಕುಲಕರ್ಣಿ, ಕೃಷ್ಣ ನಾಡಿಗೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವೇದಮೂರ್ತಿ ಶಂಕರಭಟ್ ಸೊರಟೂರ, ವೇದಮೂರ್ತಿ ದತ್ತಂಭಟ್ಟ ತೆಂಬದಮನಿ ಹಾಗೂ ವೇದಮೂರ್ತಿ ಗಣೇಶ ಭಟ್ ಪುರಾಣಿಕ ವೇದಘೋಷ ನೆರವೇರಿಸಿದರು. ನಾಡಗೀತೆಯೊಂದಿಗೆ ಕಾರ್ಯಕ್ರಮ ಆರಂಭಗೊಂಡಿತು. ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು.

## ಬಿಜೆಪಿಯಿಂದ ಬಸವೇಶ್ವರರ ಜಯಂತಿ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಜಗದಜ್ಯೋತಿ ಬಸವೇಶ್ವರರ 921ನೇ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, 12ನೇ ಶತಮಾನದಲ್ಲಿ ಬಸವೇಶ್ವರರು ಹಾಕಿಕೊಟ್ಟ ಮಾರ್ಗವನ್ನು ನಾವು ಎಲ್ಲರೂ ಅನುಸರಿಸಬೇಕು.

ಮಕ್ಕಳಿಗೆ ವಾರಕ್ಕೆ ಕನಿಷ್ಠ ಒಂದು ಬಸವೇಶ್ವರರ ವಚನವನ್ನು ಕಲಿಸಿ ಅದರಂತೆ ಜೀವನದಲ್ಲಿ ಆಚರಿಸುವಂತೆ ಪ್ರೇರೇಪಿಸಬೇಕು ಎಂದು ಹೇಳಿದರು. ಬಸವೇಶ್ವರರ ಚಿಂತನೆಗಳು ಇಂದಿನ ಸಂವಿಧಾನದ ಮೌಲ್ಯಗಳಿಗೂ ಪ್ರೇರಣೆಯಾಗಿವೆ ಎಂದರು.

ಶ್ರೀಪತಿ ಉಡುಪಿ ಮಾತನಾಡಿ, ಬಸವೇಶ್ವರರು ಅಸ್ಪೃಶ್ಯತೆ ವಿರುದ್ಧ ಹೋರಾಟ ನಡೆಸಿ ಎಲ್ಲಾ ಜಾತಿಯವರಿಗೂ ಸಮಾನ ಅವಕಾಶ ಕಲ್ಪಿಸಿದರು. "ಕಾಯಕವೇ ಕೈಲಾಸ" ಎಂಬ ಬಸವಣ್ಣನವರ ವಚನದ ಅರ್ಥವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು ಎಂದರು.

ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ ಮಾತನಾಡಿ, ಉದ್ಯೋಗದ ಆಧಾರದಲ್ಲಿ ಜಾತಿ ವ್ಯವಸ್ಥೆ ರೂಪುಗೊಂಡಿದ್ದು, ಬಸವೇಶ್ವರರು ಎಲ್ಲರನ್ನು ಸಮಾನವಾಗಿ ಕಾಣುವ ಸಮಾಜ ನಿರ್ಮಾಣಕ್ಕೆ ಪ್ರಯತ್ನಿಸಿದರು ಎಂದು ಹೇಳಿದರು.

ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಹಾಗೂ ಗದಗ-ಬೆಟಗೇರಿ ನಗರಸಭಾ ಸದಸ್ಯ ಅನೀಲ ಅಬ್ಬಿಗೇರಿ ಸಂದರ್ಭೋಚಿತವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾಂತೇಶ ಬಾತಾಖಾನಿ, ಪದ್ಮಿನಿ ಮುತ್ತಲದಿನ್ನಿ, ಡಿ.ಬಿ. ಕರೀಗೌಡ್ರ, ದೇವೇಂದ್ರಪ್ಪ ಹೂಗಾರ, ರವಿ ಮಾನ್ವಿ, ಬಸವರಾಜ ನರೆಗಲ್, ಮಲ್ಲಿಕಾರ್ಜುನ ಗೊರವರ, ಮಂಜುನಾಥ ಪಟ್ಟಣಶೆಟ್ಟಿ, ವಿನೋದ ಹಂಸನೂರ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

## ಯುವಕರಿಗೆ ಪ್ರೇರಣೆಯಾದ ಕುಟುಂಬದ ಸೇವೆ-ಸಾಧನೆ

▶▶ಮೊದಲನೇ ಪುಟದಿಂದ

ರಾಮಣ್ಣ ಮೇಗಲಮನಿ ಅವರು ಈ ಭಾಗದ ಜನತೆಗೆ ಬಸ್ ಸೌಲಭ್ಯ ಒದಗಿಸುವುದು, ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವುದು ಸೇರಿದಂತೆ ವಿವಿಧ ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಿಯುಸಿಯಲ್ಲಿ ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳು, ಕಲಾವಿದರು, ಕುಸ್ತಿ ಪಟುಗಳು, ಅಂತರಾಷ್ಟ್ರೀಯ ಯೋಗಪಟುಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಶಾಸಕರು, ಗ್ರಾಮದ ಹಿರಿಯರು ಹಾಗೂ ಗಣ್ಯರು ರಾಮಣ್ಣ ಮೇಗಲಮನಿ ಮತ್ತು ಸಂಗವ್ವ ಮೇಗಲಮನಿ ಅವರಿಗೆ ಗೌರವ ಸನ್ಮಾನ ಮಾಡಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಯರಿಸ್ವಾಮಿ ಪಿ.ಎಸ್., ತಾಪಂ ಇಓ ವಿಶ್ವನಾಥ ಹೊಸಮನಿ, ಸಮಾಜ ಕಲ್ಯಾಣ ಅಧಿಕಾರಿ ಉದಯಕುಮಾರ ಯಲಿವಾಳ, ಗಂಗಾಧರ ಅಣ್ಣಿಗೇರಿ, ವಿ.ಬಿ. ಸೋಮನಕಟ್ಟಿಮಠ, ಬಸವರಡ್ಡಿ ಬಂಡಿಹಾಳ, ನಾಗರಾಜ ಸಜ್ಜನ, ವಿಶ್ವನಾಥ ಪಾಟೀಲ, ಭುವನೇಶ್ವರಿ ಕಲ್ಲಕುಟಿಗರ, ಎಚ್.ಡಿ. ಪೂಜಾರ, ಚೆನ್ನಪ್ಪ ಹಿತ್ತಲಮನಿ, ನಾಗಪ್ಪ ಮೇಗಲಮನಿ, ಪ್ರಾಚಾರ್ಯ ಮಹಾಲಿಂಗೇಶ್ವರ ಮೇಗಲಮನಿ, ಡಾ. ಶರಣಪ್ಪ ಮೇಗಲಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಲಕ್ಷ್ಮೇಶ್ವರ: ಕೆಎಸ್‌ಆರ್‌ಟಿಸಿ ಸಾರಿಗೆ ಘಟಕದಿಂದ ಮಹಾಮಾನವತಾವಾದಿ ಬಸವಣ್ಣನವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಾರಿಗೆ ವ್ಯವಸ್ಥಾಪಕರಾದ ಸವಿತಾ ಆದಿ, ಘಟಕದ ಸಿಬ್ಬಂದಿ, ಚಾಲಕ-ನಿರ್ವಾಹಕರು ಹಾಜರಿದ್ದರು.

## ಕುಸುಬೆ ಖರೀದಿಗೆ ಬೆಂಬಲ ಬೆಲೆ: ರೈತರಿಗೆ ಅವಕಾಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

2026ನೇ ಸಾಲಿನ ಹಿಂಗಾರು ಹಂಗಾಮಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ 'ಕುಸುಬೆ' ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ರೂ. 6,540 ನಿಗದಿ ಮಾಡಲಾಗಿದ್ದು, ಮಾರ್ಗಸೂಚಿಗಳನ್ವಯ ರೈತರು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ 13 ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಸಂಘಗಳ ಮೂಲಕ ಕುಸುಬೆ ಖರೀದಿ ನಡೆಯುತ್ತಿದೆ. ಗದಗ ತಾಲೂಕಿನ ಬಳಗಾನೂರ, ಹೊಂಬಳ, ಮುಳಗುಂದ; ನರಗುಂದ ತಾಲೂಕಿನ ಕಣಕಿಕೊಪ್ಪ; ಶಿರಹಟ್ಟಿ ತಾಲೂಕಿನ ರಣತೂರ; ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ; ರೋಣ ತಾಲೂಕಿನ ಅಬ್ಬಿಗೇರಿ, ಮಾಡಲಗೇರಿ; ಗಜೇಂದ್ರಗಡ ತಾಲೂಕಿನ ನಿಡಗುಂದಿ, ನರೇಗಲ್ (ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕ ಕಂಪನಿ); ಮುಂಡರಗಿ ತಾಲೂಕಿನ ಬರದೂರ, ಪೇಠಾಲೂರ ಸೇರಿದಂತೆ ವಿವಿಧ ಕೇಂದ್ರಗಳಲ್ಲಿ ಖರೀದಿ ಪ್ರಕ್ರಿಯೆ ನಡೆಯಲಿದೆ.

ಸರ್ಕಾರದ ನಿಯಮಾವಳಿಗಳ ಪ್ರಕಾರ ಪ್ರತಿ ರೈತನಿಂದ ಎಕರೆಗೆ 5 ಕ್ವಿಂಟಲ್‌ನಂತೆ ಗರಿಷ್ಠ 20 ಕ್ವಿಂಟಲ್ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಖರೀದಿಸಲಾಗುತ್ತದೆ. ರೈತರ ಹೆಸರಿನಲ್ಲಿ ವರ್ತಕರು ತರಲಾದ ಕುಸುಬೆಯನ್ನು ಖರೀದಿಸದಂತೆ ಕ್ರಮ ಕೈಗೊಳ್ಳಲಾಗಿದ್ದು, ಯಾವುದೇ ದುರುಪಯೋಗವಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

ಏಪ್ರಿಲ್ 7ರಿಂದ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, 80 ದಿನಗಳವರೆಗೆ ನೋಂದಣಿ ಹಾಗೂ 90 ದಿನಗಳವರೆಗೆ ಖರೀದಿ ಪ್ರಕ್ರಿಯೆ ನಡೆಯಲಿದೆ. ಖರೀದಿಗೆ ಮುನ್ನ ನಾಫೆಡ್ ಮತ್ತು ಎನ್.ಸಿ.ಸಿ.ಎಫ್. ಸಂಸ್ಥೆಗಳ ಇ-ಸಮೃದ್ಧಿ/ಇ-ಸಂಯುಕ್ತಿ ಪೋರ್ಟಲ್ ಮೂಲಕ ಬಯೋಮೆಟ್ರಿಕ್ ಆಧಾರಿತ ನೋಂದಣಿ ಕಡ್ಡಾಯವಾಗಿದೆ. ಜೊತೆಗೆ ಫ್ರೂಟ್ಸ್ ದತ್ತಾಂಶವನ್ನು ಭೂಮಿ, ಆಧಾರ್ ಮತ್ತು ಬೆಳೆ ಸಮೀಕ್ಷೆ ಮಾಹಿತಿಯೊಂದಿಗೆ ಪರಿಶೀಲಿಸಲಾಗುತ್ತದೆ. ರೈತರ ಖಾತೆಗಳಿಗೆ ಡಿಬಿಟಿ ಮೂಲಕ ನಿಗದಿತ ಅವಧಿಯಲ್ಲಿ ಹಣ ಜಮೆ ಮಾಡಲಾಗುವುದರಿಂದ ರೈತರು ಯೋಜನೆಯ ಸದುಪಯೋಗ ಪಡೆಯಬೇಕು ಎಂದು ಇಲಾಖೆ ಪ್ರಕಟಣೆ ತಿಳಿಸಿದೆ.

## ಪೋಷಕರನ್ನು ವೃದ್ಧಾಪ್ಯದಲ್ಲಿ ನಿರ್ಲಕ್ಷಿಸುವುದು ವಿಷಾದನೀಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳನ್ನು ಕಷ್ಟಪಟ್ಟು ಸಾಕಿ, ಉನ್ನತ ಸ್ಥಾನಕ್ಕೆ ತಲುಪಿಸಿದ ಬಳಿಕ ಪೋಷಕರನ್ನು ವೃದ್ಧಾಪ್ಯದಲ್ಲಿ ನಿರ್ಲಕ್ಷಿಸಿ ವೃದ್ಧಾಶ್ರಮಗಳಿಗೆ ಸೇರಿಸುತ್ತಿರುವುದು ವಿಷಾದನೀಯ ಸಂಗತಿ ಎಂದು ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ ಸಂಘಟನಾ ಸಂಚಾಲಕ ಪಾಂಡು ಚವ್ಹಾಣ ಹೇಳಿದರು.

ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್, ಬೆಂಗಳೂರು ಜಿಲ್ಲಾ ಘಟಕ ಗದಗ ಆಶ್ರಯದಲ್ಲಿ ಗದಗ ತಾಲೂಕಿನ ಮಲಸಮುದ್ರ ಗ್ರಾಮದ ಆನಂದ ವೃದ್ಧಾಶ್ರಮದಲ್ಲಿ ವಯೋಸಹಜ ವೃದ್ಧ ತಾಯಂದಿರಿಗೆ ಹಣ್ಣು ಹಂಪಲು ಹಾಗೂ ತಲೆದಿಂಬುಗಳನ್ನು ವಿತರಿಸಿ ಆತ್ಮಸ್ಥೈರ್ಯ ತುಂಬುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಯಸ್ಸಾದ ವೃದ್ಧರಿಗೆ ಸುರಕ್ಷಿತ ವಸತಿ, ಪೌಷ್ಟಿಕ ಆಹಾರ ಹಾಗೂ ವೈದ್ಯಕೀಯ ಸೇವೆಗಳನ್ನು ಒದಗಿಸಿ ಆಶ್ರಯ ತಾಣವಾಗಿರುವ ಆನಂದ ವೃದ್ಧಾಶ್ರಮದ ಕಾರ್ಯ ಶ್ಲಾಘನೀಯವಾಗಿದೆ. ಮಕ್ಕಳಿಗೆ ಸಂಸ್ಕೃತಿ, ಸಂಪ್ರದಾಯ ಮತ್ತು ಮಾನವೀಯ ಮೌಲ್ಯಗಳ ಕುರಿತು ಅರಿವು ಮೂಡಿಸುವುದು ಅತ್ಯವಶ್ಯಕ. ಹಿರಿಯರು ತಮ್ಮ ಮಕ್ಕಳೊಂದಿಗೆ ನೆಮ್ಮದಿಯಿಂದ ಬದುಕುವಂತಹ ವಾತಾವರಣ ನಿರ್ಮಾಣ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಸಂವೀಕ್ಷಣಾಧಿಕಾರಿ ಡಾ. ವೆಂಕಟೇಶ್ ರಾಠೋಡ ಮಾತನಾಡಿ, ಸಂಧ್ಯಾಕಾಲದಲ್ಲಿ ತಂದೆ-ತಾಯಿಯನ್ನು ನೋಡಿಕೊಳ್ಳುವುದು ಮಕ್ಕಳ ಕರ್ತವ್ಯ. ಆಸ್ತಿ-ಅಂತಸ್ತಿಗಿಂತ ತಮ್ಮವರನ್ನು ಜೋಪಾನ ಮಾಡುವುದೇ ಮಹತ್ತರ ಸೇವೆಯಾಗಿದ್ದು, ಈ ಆಶ್ರಮ ಅದನ್ನು ಸಮರ್ಪಕವಾಗಿ ನಿರ್ವಹಿಸುತ್ತಿದೆ ಎಂದರು.

ಪರಿಷತ್ ರಾಜ್ಯ ಮಾರ್ಗದರ್ಶಕರಾದ ಡಾ. ಶಾಂತಕುಮಾರ ಬಿ. ಭಜಂತ್ರಿ ಮಾತನಾಡಿ, ವೃದ್ಧರು ನೋವು-ಕಷ್ಟಗಳನ್ನು ಮರೆತು ದೇವರಲ್ಲಿ ಧ್ಯಾನ ಮಾಡುತ್ತ ಸುಖ-ಶಾಂತಿಯಿಂದ ಕಾಲ ಕಳೆಯಬೇಕು. ಅವರ ಆಯುಷ್ಯ ಹಾಗೂ ಆರೋಗ್ಯ ಉತ್ತಮವಾಗಿರಲಿ ಎಂದು ಹಾರೈಸಿದರು. ವೃದ್ಧಾಶ್ರಮದ ಸಂಸ್ಥಾಪಕ ಅಧ್ಯಕ್ಷ ಗಂಗಾಧರ ನಭಾಪುರ ಮಾತನಾಡಿ, ವೃದ್ಧರಿಗೆ ಮನೆಯಂತೆಯೇ ವಾತಾವರಣ ನಿರ್ಮಿಸಿ ಸದಾ ಹಸನ್ಮುಖಿಗಳಾಗಿರಲು ಪ್ರಯತ್ನಿಸಲಾಗುತ್ತಿದೆ. ಆಶ್ರಮದ ಪಕ್ಕದಲ್ಲಿ ಮಹಾಗಣಪತಿ ದೇವಸ್ಥಾನ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಯೋಗ ಮತ್ತು ಧ್ಯಾನದ ಮೂಲಕ ವೃದ್ಧರ ಆರೋಗ್ಯ ಕಾಪಾಡುವ ಸಂಕಲ್ಪ ಕೈಗೊಳ್ಳಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ವೃದ್ಧರಿಗೆ ಆಶ್ರಯ ಕಲ್ಪಿಸುವ ಗುರಿ ಹೊಂದಲಾಗಿದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ ಗದಗ ಜಿಲ್ಲಾಧ್ಯಕ್ಷೆ ಶ್ರೀಮತಿ ರತ್ನಾ ಗಿ. ಬದಿ ಮಾತನಾಡಿ, ಪರಿಷತ್ ಮೂಲಕ ಹಲವು ರಚನಾತ್ಮಕ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಆಶ್ರಮದ ಫಲಾನುಭವಿಗಳಿಗೆ ಸಹಾಯ-ಸಹಕಾರ ನೀಡುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕೃಷ್ಣಪ್ಪ, ಮಂಗಳಗೌರಿ, ಪ್ರಭು, ಪದ್ಮಾ, ಮ್ಯಾಗೇರಿ ಸೇರಿದಂತೆ ಆಶ್ರಮದ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

# ರಿವಾರ್ಡ್ ಯೋಜನೆ ಕಾಮಗಾರಿಗಳ ಮೌಲ್ಯಮಾಪನ

### ನೀಲಗುಂದ ಉಪ ಜಲಾನಯನ ಪ್ರದೇಶಕ್ಕೆ ಕೃಷಿ ಅಧಿಕಾರಿಗಳ ಭೇಟಿ

> "ರೈತರ ಸಹಭಾಗಿತ್ವದಿಂದಲೇ ಯೋಜನೆಗಳು ಯಶಸ್ವಿಯಾಗುತ್ತವೆ. ನೀಲಗುಂದದಲ್ಲಿ ರಿವಾರ್ಡ್ ಯೋಜನೆ ಉತ್ತಮವಾಗಿ ಜಾರಿಯಾಗಿದೆ."
> – **ಸಹದೇವ ಯರಗೋಪ್ಪ,** ಉಪ ಕೃಷಿ ನಿರ್ದೇಶಕರು, ಚಿಕ್ಕೋಡಿ



**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿ ನಡೆದ ವಿವಿಧ ಕಾಮಗಾರಿಗಳ ಮೌಲ್ಯಮಾಪನಕ್ಕಾಗಿ ಬೆಳಗಾವಿ ಜಿಲ್ಲೆಯ ಕೃಷಿ ಅಧಿಕಾರಿಗಳು ಏಪ್ರಿಲ್ 17 ಮತ್ತು 18ರಂದು ಗದಗ ತಾಲ್ಲೂಕಿನ ನೀಲಗುಂದ ಉಪ ಜಲಾನಯನ ಪ್ರದೇಶಕ್ಕೆ ಭೇಟಿ ನೀಡಿದರು.

ಯೋಜನೆಯಡಿ ಕೈಗೊಳ್ಳಲಾದ ಕೃಷಿ ಹೊಂಡ, ಬದು ನಿರ್ಮಾಣ, ನಾಲಾ ರಿವಿಟ್‌ಮೆಂಟ್, ನಾಲಾ ಸ್ಥಿರೀಕರಣ, ಕೋಡಿ ನಿರ್ಮಾಣ, ಚೆಕ್ ಡ್ಯಾಮ್, ಗೋಕಟ್ಟೆ ಸೇರಿದಂತೆ ಮಣ್ಣು ಮತ್ತು ನೀರು ಸಂರಕ್ಷಣೆಗೆ ಸಂಬಂಧಿಸಿದ ಹಲವಾರು ಕಾಮಗಾರಿಗಳನ್ನು ಅಧಿಕಾರಿಗಳು ಪರಿಶೀಲಿಸಿದರು. ಅರಣ್ಯ ಮತ್ತು ತೋಟಗಾರಿಕೆ ಘಟಕದಲ್ಲಿ ನೆಡಲಾದ ಸಸಿಗಳು ಹಾಗೂ ಸಾಂಸ್ಥಿಕ ನೆಡುತೋಪುಗಳನ್ನು ವೀಕ್ಷಿಸಿದರು.

ಕ್ಷೇತ್ರ ಭೇಟಿ ನಂತರ ಮುಳಗುಂದ ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಮಠದ ಸಭಾಭವನದಲ್ಲಿ ನಡೆದ ಗುಂಪು ಚರ್ಚೆಯಲ್ಲಿ ಅಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ಸ್ವ ಸಹಾಯ ಸಂಘದ ಸದಸ್ಯರು, ರೈತರು ಹಾಗೂ ರೈತ ಸಂಘದ ಪದಾಧಿಕಾರಿಗಳು ಭಾಗವಹಿಸಿದರು. ಯೋಜನೆಯಿಂದ ಪಡೆದ ಪ್ರಯೋಜನಗಳ ಕುರಿತು ರೈತರು ಮಾಹಿತಿ ಹಂಚಿಕೊಂಡರು.

ಚಿಕ್ಕೋಡಿ ಉಪ ಕೃಷಿ ನಿರ್ದೇಶಕರಾದ ಸಹದೇವ ಯರಗೋಪ್ಪ ಮಾತನಾಡಿ, ರೈತರ ಸಕ್ರಿಯ ಸಹಭಾಗಿತ್ವದಿಂದಲೇ ಇಂತಹ ಯೋಜನೆಗಳು ಯಶಸ್ವಿಯಾಗುತ್ತವೆ. ನೀಲಗುಂದ ಪ್ರದೇಶದಲ್ಲಿ ರಿವಾರ್ಡ್ ಯೋಜನೆ ಅನುಷ್ಠಾನಗೊಂಡಿರುವ ರೀತಿ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಗದಗ ಉಪ ಕೃಷಿ ನಿರ್ದೇಶಕಿ ಶ್ರೀಮತಿ ಸ್ಫೂರ್ತಿ ಮಾತನಾಡಿದರು. ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಸವರಾಜ, ಅಣ್ಣಾಸಾಹೇಬ ಚೌಗಲೇ, ಚನಗೌಡ ಪಾಟೀಲ, ಸಿಕಂದರ್ ಮಡ್ಡಿಮನಿ, ದೇವಪ್ಪ ಅಣ್ಣಿಗೇರಿ, ಬಸವರಾಜ ಕರಿಗಾರ, ಯಲ್ಲಪ್ಪ ಕಲ್ಯಾಣಿ, ಶಿವಯ್ಯ ಮನಗೇನಿ, ಚಂದ್ರಶೇಖರ ಜಕ್ಕಮ್ಮನವರ ಸೇರಿದಂತೆ ರೈತರು, ರೈತ ಸಂಘದ ಪದಾಧಿಕಾರಿಗಳು ಹಾಗೂ ರಿವಾರ್ಡ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಶೇಖರ್ ಸ್ವಾಗತಿಸಿದರು. ಎಫ್.ಸಿ. ಗುರಿಕಾರ ವಂದಿಸಿದರು. ಮಂಜುನಾಥ ಬ್ಯಾಳಿ ನಿರೂಪಿಸಿದರು.

# ಒಗ್ಗಟ್ಟಿನಿಂದ ಮಾತ್ರ ದೊಡ್ಡ ಕಾರ್ಯಗಳು ಸಾಧ್ಯವಾಗುತ್ತವೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಾತ್ರೆಗಳು ಮತ್ತು ಹಬ್ಬಗಳು ಸಮಾಜದಲ್ಲಿ ಇರುವ ಜಾತಿ-ವೈಮನಸ್ಸುಗಳನ್ನು ದೂರ ಮಾಡುತ್ತವೆ. ಒಗ್ಗಟ್ಟಿನಿಂದ ಮಾತ್ರ ದೊಡ್ಡ ಕಾರ್ಯಗಳು ಸಾಧ್ಯವಾಗುತ್ತವೆ ಎಂದು ಹರ್ಲಾಪುರದ ಶ್ರೀ ಡಾ. ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹೇಳಿದರು.

ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ದೇವಾಲಯದ 64ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಬಸವ ಮಂಟಪದಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಭಕ್ತಿಭಾವದಿಂದ ಜಾತ್ರೆಗಳಲ್ಲಿ ಭಾಗವಹಿಸುವ ಮೂಲಕ ದ್ವೇಷ, ಅಸೂಯೆ ಹಾಗೂ ಜಾತಿಭಾವನೆಗಳನ್ನು ದೂರ ಮಾಡಬೇಕು ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಶಾಂತ ಶಾಬಾದಿಮಠ ಮಾತನಾಡಿ, ಎಲ್ಲರ ಸಹಕಾರದಿಂದ ಜಾತ್ರೋತ್ಸವ ಯಶಸ್ವಿಯಾಗಿ ನಡೆಯುತ್ತಿದೆ.

ಮುಂದೆಯೂ ಒಗ್ಗಟ್ಟಿನಿಂದ ಹಾಗೂ ಭಕ್ತಿಯಿಂದ ಜಾತ್ರೆಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಹೇಳಿದರು.

ಮಾಜಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಮೋಹನ ಲಿಂಬಿಕಾಯಿ ಮಾತನಾಡಿ, ಮಾನವಧರ್ಮಕ್ಕೆ ಜಯವಾಗಲಿ ಎಂಬ ತತ್ವವನ್ನು ನಾವು ಪಾಲಿಸಬೇಕಿದೆ. ಜಾತಿ ಮತ್ತು ಧರ್ಮದ ಹೆಸರಿನಲ್ಲಿ ದ್ವೇಷ ಬಿತ್ತುವುದನ್ನು ತೊರೆದು ಸೌಹಾರ್ದತೆಯನ್ನು ಬೆಳೆಸಬೇಕು ಎಂದು ಹೇಳಿದರು.

ಭೂಗರ್ಭ ಶಾಸ್ತ್ರಜ್ಞ ಡಾ. ಎಸ್. ಕೆ. ವ್ಯಾಗೇರಿ ಅವರು ಪರಿಸರ ಹಾಗೂ ಭೂಗರ್ಭದ ಮಹತ್ವ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹಲವಾರು ಗಣ್ಯರು, ಹಿರಿಯರು ಹಾಗೂ ಯುವಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

**ಸಿಇಟಿ ಪೂರ್ವಸಿದ್ಧತಾ ಸಭೆ: ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ**

# ಪರೀಕ್ಷೆ ಪಾರದರ್ಶಕವಾಗಿ ನಡೆಸಲು ಸೂಚನೆ

"ಪರೀಕ್ಷೆಗಳು ಶಾಂತಿಯುತವಾಗಿ ಹಾಗೂ ಪಾರದರ್ಶಕವಾಗಿ ನಡೆಯುವಂತೆ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕೆಲಸ ಮಾಡಬೇಕು."
– ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

**ನಿಷೇಧಿತ ವಸ್ತುಗಳು**

ಪರೀಕ್ಷಾರ್ಥಿಗಳು ಮೊಬೈಲ್ ಫೋನ್, ಬ್ಲೂಟೂತ್, ಕ್ಯಾಲ್ಕುಲೇಟರ್, ವೈರ್‌ಲೆಸ್ ಸಾಧನಗಳು, ಪೇಪರ್ ಚೀಟಿ, ಪುಸ್ತಕಗಳು ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರಲು ಅವಕಾಶ ಇರುವುದಿಲ್ಲ. ಕೈಗಡಿಯಾರ ಧರಿಸುವುದಕ್ಕೂ ನಿರ್ಬಂಧ ಹೇರಲಾಗಿದೆ.



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಎಪ್ರಿಲ್ 23 ಮತ್ತು 24ರಂದು ನಡೆಯಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ)ಗಳನ್ನು ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಿಇಟಿ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮ, ಅವ್ಯವಹಾರಗಳಿಗೆ ಅವಕಾಶ ನೀಡದೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು. ಪರೀಕ್ಷಾರ್ಥಿಗಳಿಗೆ ತುರ್ತು ಆರೋಗ್ಯ ತಪಾಸಣೆಗೆ ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ಅವರು ಸೂಚಿಸಿದರು.

ನಿಷೇಧಾಜ್ಞೆ ಜಾರಿ: ಪರೀಕ್ಷಾ ಕೇಂದ್ರಗಳಲ್ಲಿ ನಕಲು ಹಾಗೂ ಅವ್ಯವಹಾರ ತಡೆಗಟ್ಟುವ ಉದ್ದೇಶದಿಂದ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಏಪ್ರಿಲ್ 23 ಮತ್ತು 24ರಂದು ಬೆಳಿಗ್ಗೆ 8.30ರಿಂದ ಸಂಜೆ 5ರವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿರುತ್ತದೆ.

ಈ ಅವಧಿಯಲ್ಲಿ ಪರೀಕ್ಷಾರ್ಥಿಗಳು ಹಾಗೂ ಸಿಬ್ಬಂದಿಯನ್ನು ಹೊರತುಪಡಿಸಿ ಇತರರಿಗೆ ಪ್ರವೇಶ ನಿರ್ಬಂಧಿಸಲಾಗಿದೆ. ಐದು ಅಥವಾ ಅದಕ್ಕಿಂತ ಹೆಚ್ಚು ಮಂದಿ ಗುಂಪುಕೂಡುವುದಕ್ಕೂ ಅವಕಾಶ ಇರುವುದಿಲ್ಲ. ಪರೀಕ್ಷಾ ಕೇಂದ್ರಗಳ ಸುತ್ತಲಿನ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್‌ಗಳನ್ನು ಬಂದ್ ಮಾಡಲು ಆದೇಶಿಸಲಾಗಿದೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ ಅವರು ಮಾತನಾಡಿ, ಜಿಲ್ಲೆಯ 10 ಪರೀಕ್ಷಾ ಕೇಂದ್ರಗಳಲ್ಲಿ 3,533 ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯಲು ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಅಂಬಾಭವಾನಿ ದೇವಸ್ಥಾನ ವಾರ್ಷಿಕೋತ್ಸವದಲ್ಲಿ ಶಾಸಕ ನೇಮಿರಾಜ ನಾಯ್ಕ**

# ಸಮುದಾಯ ಭವನಕ್ಕೆ 25 ಲಕ್ಷ ಅನುದಾನ-ಜೂನ್‌ನಲ್ಲಿ ಕಾಮಗಾರಿಗೆ ಚಾಲನೆ



ಸಮಾಜದ ಅಧ್ಯಕ್ಷ ದೀಪಕ್ ಕಠಾರೆ ಮಾತನಾಡಿ, 17 ವರ್ಷಗಳಿಂದ ಬಾಕಿ ಉಳಿದಿದ್ದ ದೇಗುಲದ ಗೋಪುರ ನಿರ್ಮಾಣ ಪೂರ್ಣಗೊಳಿಸಿ ಕಳಸಾರೋಹಣ ನೆರವೇರಿಸಲಾಗಿದೆ. ಹರಿಹರದ ತಪೋವನದ ಡಾ. ಶಶಿಕುಮಾರ್ ಮೆಹರವಾಡೆ ಹಾಗೂ ಅಮರ್ ದಲಬಂಜನ್ ಸಮುದಾಯ ಭವನ ನಿವೇಶನ ಖರೀದಿಗೆ ದೇಣಿಗೆ ನೀಡಿದ್ದಾರೆ ಎಂದು ಹೇಳಿದರು.

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಅನುದಾನದಲ್ಲಿ 25 ಲಕ್ಷ ಮಂಜೂರು ಮಾಡಿ ಪಟ್ಟಣದಲ್ಲಿ ಎಸ್.ಎಸ್.ಕೆ. ಸಮಾಜದ ಸಹಸ್ರಾರ್ಜುನ ಸಮುದಾಯ ಭವನ ನಿರ್ಮಾಣಕ್ಕೆ ಜೂನ್‌ನಲ್ಲಿ ಚಾಲನೆ ನೀಡಲಾಗುತ್ತದೆ ಎಂದು ಶಾಸಕ ನೇಮಿರಾಜ ನಾಯ್ಕ ತಿಳಿಸಿದರು.

ಪಟ್ಟಣದ ಜಗದಂಬಾ ದೇಗುಲದ 17ನೇ ವಾರ್ಷಿಕೋತ್ಸವ, ಗಣೇಶ ಹಾಗೂ ದತ್ತಾತ್ರೇಯ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ನಿಮಿತ್ತ ತಾಲೂಕು ಎಸ್.ಎಸ್.ಕೆ. ಸಮಾಜ ಆಯೋಜಿಸಿದ್ದ ಧಾರ್ಮಿಕ ಸಭೆಯನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಸದಸ್ಯರು ಶ್ರಮಜೀವಿಗಳಾಗಿದ್ದು, ಅವರ ಕಾಯಕ ಶ್ರದ್ಧೆ ಮಾದರಿಯಾಗಿದೆ. ಸಮುದಾಯದ ಸಹಭಾಗಿತ್ವದಲ್ಲಿ ಕುಲದೇವತೆಯ ಭವ್ಯ ಮಂದಿರ ನಿರ್ಮಾಣ ಮಾಡಿರುವುದು ಶ್ಲಾಘನೀಯ ಎಂದರು. ಸಮಾಜದ ಮಾಜಿ ಕಾರ್ಯದರ್ಶಿ ಲಕ್ಷ್ಮಿಕಾಂತ ಭಾವಿಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ದೇಗುಲ ಮತ್ತು ಗೋಪುರ ನಿರ್ಮಾಣಕ್ಕೆ ನೆರವಾದ ಸಂಡೂರಿನ ಮಹಾರಾಜ ಕಾರ್ತಿಕ್ ಎಂ. ಘೋರ್ಪಡೆ ಅವರನ್ನು ಸ್ಮರಿಸಿದರು. ಸಮುದಾಯ ಭವನಕ್ಕೆ ಅನುದಾನ ಒದಗಿಸುವಂತೆ ಶಾಸಕರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಹಾಗೂ ದೇಣಿಗೆ ನೀಡಿದ ದಾನಿಗಳನ್ನು ಸನ್ಮಾನಿಸಲಾಯಿತು.

ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು, ಹಂಪಸಾಗರ ಶಿವಲಿಂಗ ರುದ್ರಮುನಿ ಶ್ರೀಗಳು, ಶಾಖಾ ಗವಿ ಮಠದ ಮರಿ ಶಾಂತವೀರ ಶ್ರೀಗಳು, ಹಾಲ ಸಿದ್ದೇಶ್ವರ ಶ್ರೀಗಳು, ಹಿಮಾಚಲ ಪ್ರದೇಶದ ಪ್ರಕಾಶ ಸ್ವರೂಪ ಶ್ರೀಗಳು, ಬಾಲಯೋಗಿನಿ ಜಯಶ್ರೀ ಮಾತಾಜಿ, ತಾರಾಚಂದ ಮಹಾರಾಜ ಶ್ರೀಗಳು ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಜ್ಯ ಘಟಕದ ಖಜಾಂಚಿ ಕೃಷ್ಣಮೂರ್ತಿ ರಂಗರೇಜ್, ಭಾಗ್ಯನಗರ ಸಮಾಜದ ಅಧ್ಯಕ್ಷ ಜವಾಹರಸಾ ಅಂಟಾಳಮರದ, ಬಳ್ಳಾರಿ ಸಮಾಜದ ಅಧ್ಯಕ್ಷ ಶ್ರೀನಿವಾಸ್ ಚಾವಡಿಮನಿ, ಮುಂಡರಗಿ ಸಮಾಜದ ಅಧ್ಯಕ್ಷ ಅಶೋಕಸಾ ಸಿದ್ಲಿಂಗ, ಮಾಜಿ ಅಧ್ಯಕ್ಷರು ರಂಗನಾಥಸಾ ಕಠಾರೆ, ಅಶೋಕ ಮೆಹರವಾಡೆ, ಉಪಾಧ್ಯಕ್ಷ ಪರಶುರಾಮಸಾ ಪವಾರ್, ಡಾ. ಜಯವಂತರಾವ್ ಕಾಶೀಗಾವ್, ಮಹಿಳಾ ಘಟಕದ ಅಧ್ಯಕ್ಷೆ ಸೋನಾಬಾಯಿ ಭಾವಿಕಟ್ಟಿ, ವಿಶ್ವಕರ್ಮ ಸಮಾಜದ ಅಧ್ಯಕ್ಷ ಸಿ.ಎಚ್. ಸಿದ್ಧರಾಜು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಂಗೀತ ಶಿಕ್ಷಕಿ ಶಾರದಾ ಮಂಜುನಾಥ್ ಪ್ರಾರ್ಥನೆ ನೆರವೇರಿಸಿದರು. ರಾಮೂಸಾ ಕಾಟವಾ, ಬಾಳಕೃಷ್ಣಸಾ ದಲಬಂಜನ್, ರಾಕೇಶ್ ಭಾವಿಕಟ್ಟಿ, ಓಂಕಾರ್ ಭಾವಿಕಟ್ಟಿ, ಕೃಷ್ಣಾಸಾ ಬಾಕಳೆ ಕಾರ್ಯಕ್ರಮ ನಿರ್ವಹಿಸಿದರು.

ಸಮಾಜದ ಪದಾಧಿಕಾರಿಗಳಾದ ಉಪಾಧ್ಯಕ್ಷ ಪರಶುರಾಮ ಪವಾರ್, ಖಜಾಂಚಿ ದಿಲೀಪ್ ಭಾವಿಕಟ್ಟಿ, ಪ್ರಧಾನ ಕಾರ್ಯದರ್ಶಿ ಪ್ರಮೋದ್ ಮೇಘರಾಜ್, ಸಹಕಾರ್ಯದರ್ಶಿ ರಾಜು ಮೇಘರಾಜ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಎರಡು ದಿನದಲ್ಲೇ ಮನೆಗಣತಿ ಪೂರ್ಣ: ಕೆ. ಮಾರುತಿ ಜಿಲ್ಲೆಗೆ ಪ್ರಥಮ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕೇಂದ್ರ ಸರ್ಕಾರ ಮನೆಗಣತಿಯ ಮೊದಲ ಹಂತಕ್ಕೆ ಚಾಲನೆ ನೀಡಿದ್ದು, ಜನಸಂಖ್ಯೆಯ ನಿಖರ ಮಾಹಿತಿಯನ್ನು ಸಂಗ್ರಹಿಸಲು ಇದು ಅತ್ಯಂತ ಮಹತ್ವದ ಹಂತವಾಗಿದೆ.

ಹಗರಿಬೊಮ್ಮನಹಳ್ಳಿ ತಾಲೂಕಿನ ಶಿಕ್ಷಕ ಗಣತಿದಾರ ಕೆ. ಮಾರುತಿ ಅವರು ಗಣತಿ ಕಾರ್ಯವನ್ನು ಕೇವಲ ಎರಡು ದಿನಗಳಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಿ ತಾಲೂಕು ಹಾಗೂ ಜಿಲ್ಲೆಯಲ್ಲೇ ಪ್ರಥಮ ಸ್ಥಾನ ಪಡೆದಿದ್ದಾರೆ.



ಬಿಇಒ ಕಚೇರಿಯ ಸಂಯೋಜಕರಾದ ಗುರು ಬಸವರಾಜ್ ಹಾಗೂ ಮೇಲ್ವಿಚಾರಕರ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಿಸಿದ ಅವರು, ಸಮಯ ಪಾಲನೆ ಹಾಗೂ ಶ್ರಮದಿಂದ ಕಾರ್ಯವನ್ನು ಸಮರ್ಪಕವಾಗಿ ನೆರವೇರಿಸಿದ್ದಾರೆ.

"ಮನೆಗಣತಿ ಕಾರ್ಯವನ್ನು ನಿಖರವಾಗಿ ಮತ್ತು ಸಮಯಕ್ಕೆ ಪೂರ್ಣಗೊಳಿಸಿರುವುದು ಶ್ಲಾಘನೀಯ. ಇಂತಹ ಕಾರ್ಯಗಳು ಆಡಳಿತಕ್ಕೆ ದಿಟ್ಟ ಮಾಹಿತಿಯನ್ನು ಒದಗಿಸುತ್ತವೆ," ಎಂದು ತಹಶೀಲ್ದಾರ್ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಕೆ. ಮಾರುತಿ ಅವರ ಸಾಧನೆ ತಾಲೂಕಿಗೆ ಹಾಗೂ ಶಿಕ್ಷಣದೊಂದಿಗೆ ಇಲಾಖೆಗೆ ಹೆಮ್ಮೆಯ ಸಂಗತಿಯಾಗಿದ್ದು, ಇತರ ಗಣತಿದಾರರಿಗೆ ಪ್ರೇರಣೆಯಾಗಲಿದೆ.

# ಸಿಬಾರಗಟ್ಟಿ ತ್ರಿಶೂಲ ಧ್ವಂಸ: ದುಷ್ಕರ್ಮಿಗಳ ಕೃತ್ಯಕ್ಕೆ ಜನರ ಆಕ್ರೋಶ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ಜಿಲ್ಲೆಯ ಡಂಬಳ ಹೋಬಳಿ ವ್ಯಾಪ್ತಿಯ ಮೇವುಂಡಿ ಗ್ರಾಮದ ಸಮೀಪದ ಮುಖ್ಯ ರಸ್ತೆಯಲ್ಲಿ ಸ್ಥಾಪಿಸಲಾಗಿದ್ದ ಸಿಬಾರಗಟ್ಟಿ ತ್ರಿಶೂಲವನ್ನು ದುಷ್ಕರ್ಮಿಗಳು ಧ್ವಂಸಗೊಳಿಸಿರುವ ಘಟನೆ ಇತ್ತೀಚೆಗೆ ಸಂಭವಿಸಿದೆ.

ಈ ಘಟನೆ ಬೆಳಕಿಗೆ ಬಂದ ತಕ್ಷಣ ಸ್ಥಳೀಯ ಗ್ರಾಮಸ್ಥರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಸಿಬಾರಗಟ್ಟಿ ತ್ರಿಶೂಲವು ಸ್ಥಳೀಯರ ಭಕ್ತಿ ಹಾಗೂ ಧಾರ್ಮಿಕ ನಂಬಿಕೆಯ ಸಂಕೇತವಾಗಿದ್ದು, ಅದನ್ನು ಹಾನಿಗೊಳಿಸಿರುವುದು ಗ್ರಾಮಸ್ಥರ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಆರೋಪಿಸಿದ್ದಾರೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ಸ್ಥಳಕ್ಕೆ ಆಗಮಿಸಿದ ಗ್ರಾಮಸ್ಥರು ದುಷ್ಕರ್ಮಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.



"ಇಂತಹ ಕೃತ್ಯಗಳು ಸಮಾಜದಲ್ಲಿ ಅಶಾಂತಿ ಉಂಟುಮಾಡುತ್ತವೆ. ತಕ್ಷಣವೇ ಆರೋಪಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು," ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮೇವುಂಡಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಕಾರ್ಪೋರೇಟ್ ಪರ ನೀತಿಗಳ ವಿರುದ್ಧ ಹೋರಾಟಕ್ಕೆ ಕರೆ

▶▶ ಮೊದಲನೇ ಪುಟದಿಂದ

ನೈಜ ಫಲಾನುಭವಿಗಳನ್ನು ಕಡೆಗಣಿಸಿ ಸ್ಥಿತಿವಂತರಿಗೆ ಮನೆ ನೀಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸ್ಲಂ ಜನರನ್ನು ಕೇವಲ ಮತಬ್ಯಾಂಕ್ ಬಳಸಿಕೊಳ್ಳಲಾಗುತ್ತಿದ್ದು, ಮುಂದಿನ ಚುನಾವಣೆಯಲ್ಲಿ ಇಂತಹ ಜನಪ್ರತಿನಿಧಿಗಳಿಗೆ ತಕ್ಕ ಉತ್ತರ ನೀಡಲು ಜನರು ಸಜ್ಜಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಶೋಕ ಕುಸಬಿ, ಮೌಲಾಸಾಬ ಗಚ್ಚಿ, ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಪುಷ್ಪಾ ಬಿಜಾಪೂರ, ಶರಣಪ್ಪ ಸೂಡಿ, ಸಾಕ್ರುಬಾಯಿ ಗೋಸಾವಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲ್‌ನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ವೀರಶೈವ ಮಹಾಸಭಾದಿಂದ ವಿನೂತನ ಬಸವ ಜಯಂತಿ ಆಚರಣೆ**

# ಗೋಶಾಲೆಯಲ್ಲಿ ದನಕರಗಳ ಆರೋಗ್ಯ ತಪಾಸಣೆ!



**■ ವಿಜಯಸಾಕ್ಷಿ ಸುದ್ದಿ, ಗದಗ**

ಬಸವ ಜಯಂತಿ ಅಂಗವಾಗಿ ಅಖಿಲ ಭಾರತ ವೀರಶೈವ ಮಹಾಸಭಾ ಗದಗ ತಾಲೂಕು ಘಟಕವು ಗೋಶಾಲೆಯಲ್ಲಿನ ಸಂರಕ್ಷಿತ ದನಕರಗಳ ಆರೋಗ್ಯ ತಪಾಸಣೆ ಹಾಗೂ ಪಶು ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಮೂಲಕ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಂಡಿತು.

ನಗರದ ಪಾಂಜರಪೋಳದ ಮಹಾವೀರ ಗೋಶಾಲೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಹಿರಿಯ ಪಶುವೈದ್ಯರಾದ ಡಾ. ಪ್ರಕಾಶ ಜಟ್ಟೆಣ್ಣವರ, ಡಾ. ಎಸ್.ಎಸ್. ಜಿನಗಾ ಮತ್ತು ಡಾ. ಆರ್.ವೈ. ಗುರಿಕಾರ ಅವರು ದನಕರಗಳ ಆರೋಗ್ಯ ತಪಾಸಣೆ ನಡೆಸಿ, ಪಶು ಆಹಾರ, ಪೋಷಣೆ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿ ನೀಡಿದರು. ಕೋವಿಡ್ ಅವಧಿಯಲ್ಲಿ ಪಶುಗಳ ಸಂಕಷ್ಟಗಳನ್ನು ಉಲ್ಲೇಖಿಸಿ, ಸಕಲ ಜೀವಿಗಳಿಗೆ ದಯೆ ತೋರಿಸುವ ಅಗತ್ಯವಿದೆ ಎಂದು ತಿಳಿಸಿದರು.

ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಬಸಪ್ಪ ಗುಡಿಮನಿ ಮಾತನಾಡಿ, ದನಕರುಗಳು ಮಾನವ ಮತ್ತು ಕೃಷಿಗೆ ಆಪ್ತಸಹಚರರಾಗಿದ್ದು, ಭಾರತೀಯ ಸಂಸ್ಕೃತಿಯಲ್ಲಿ ಗೋಮಾತೆಗೆ ವಿಶೇಷ ಸ್ಥಾನವಿದೆ. ಪಶು ಸಂರಕ್ಷಣೆ ಹೈನೋದ್ಯಮ ಮತ್ತು ಸಾವಯವ ಕೃಷಿಗೆ ಅತ್ಯಂತ ಮುಖ್ಯ ಎಂದರು.

ಪತ್ರಕರ್ತ ಬಸವರಾಜ ದಂಡಿನ ಮಾತನಾಡಿ, ಯಾವುದೇ ಡಂಬಾಚಾರವಿಲ್ಲದೆ ನೈಜತೆಯಿಂದ ಕೈಗೊಂಡ ಈ ಕಾರ್ಯಕ್ರಮ ಮಾದರಿಯಾಗಿದೆ. ಗೋಸಂರಕ್ಷಣೆಯಂತಹ ಕಾರ್ಯಗಳಿಗೆ ಹೆಚ್ಚಿನ ಪ್ರೋತ್ಸಾಹ ದೊರಕಬೇಕು ಎಂದರು.

ತಾಲೂಕು ಘಟಕದ ಅಧ್ಯಕ್ಷೆ ಲತಾ ಮುತ್ತಿನಪೆಂಡಿಮಠ ಮಾತನಾಡಿ, ವೈಯಕ್ತಿಕ ಸಂಭ್ರಮಗಳ ಸಂದರ್ಭದಲ್ಲಿ ಖರ್ಚು ಮಾಡುವ ಹಣವನ್ನು ಪಶು ಆಹಾರಕ್ಕೆ ಬಳಸುವ ಮೂಲಕ ಸಮಾಜಮುಖಿ ಕಾರ್ಯಗಳನ್ನು ಉತ್ತೇಜಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾಸಭಾ ತಾಲೂಕು ಘಟಕದ ಅಧ್ಯಕ್ಷ ಮಹೇಶ ಕೋಟಿ ಮಾತನಾಡಿ, ನಿರ್ಲಕ್ಷಿತ ಮತ್ತು ಬಿಡಾಡಿ ದನಕರಗಳನ್ನು ಸಂರಕ್ಷಿಸಿ ಗೋಶಾಲೆಯಲ್ಲಿ ಪೋಷಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ. ಸಮಾಜದ ಸಹಕಾರದಿಂದ ಈ ಕಾರ್ಯ ಯಶಸ್ವಿಯಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಗೋ ಸೇವಾ ಸಮಿತಿಯ ಉಪಾಧ್ಯಕ್ಷ ಪ್ರಕಾಶ ಬಂದಾ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ, ಶೈಲೇಶ್ ಬಾಗಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಿಧನ

## ಸುಶೀಲಾ ನೀಲಗುಂದ



**ಮುಳಗುಂದ:** ಪಟ್ಟಣದ ಮುಳಗುಂದ ಸೌಹಾರ್ದ ಕೋ-ಆಪ್ ಅರ್ಬನ್ ಬ್ಯಾಂಕ್ ಅಧ್ಯಕ್ಷರು ಹಾಗೂ ಗದಗ ಎಪಿಎಂಸಿ ಮಾಜಿ ಅಧ್ಯಕ್ಷರಾದ ಶಿವಪ್ಪ ಮಹಾದೇವಪ್ಪ ನೀಲಗುಂದ ಅವರ ಪತ್ನಿ ಸುಶೀಲಾ ಶಿವಪ್ಪ ನೀಲಗುಂದ (78) ಅವರು ಭಾನುವಾರ ಬೆಳಿಗ್ಗೆ ನಿಧನರಾಗಿದ್ದಾರೆ.

ಮೃತರಿಗೆ ಪತಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧುಬಳಗವಿದೆ.

ಸಂತಾಪ ಸೂಚನೆ: ಮಣಕವಾಡದ ಅಭಿನವ ಮೃತ್ಯುಂಜಯ ಸ್ವಾಮೀಜಿ, ನೀಲಗುಂದದ ಪ್ರಭುಲಿಂಗ ದೇವರು, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಉದ್ಯಮಿ ವಿಜಯಕುಮಾರ ಗಡ್ಡಿ, ಗದಗ ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ಗದಗ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

# ಸನ್ಮಾರ್ಗ ಕಾಲೇಜಿನಲ್ಲಿ ಶಂಕರಾಚಾರ್ಯರ ಜಯಂತಿ ಆಚರಣೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಸನಾತನ ಭಾರತೀಯ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸಿದ ಮಹಾನ್ ದಾರ್ಶನಿಕರಲ್ಲಿ ಪ್ರಮುಖರಾದ ಶ್ರೀ ಆದಿ ಶಂಕರಾಚಾರ್ಯರು ಅದ್ವೈತ ವೇದಾಂತದ ಪ್ರತಿಪಾದಕರಾಗಿ ಅಪಾರ ಕೊಡುಗೆ ನೀಡಿದ್ದಾರೆ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ ಹೇಳಿದರು.

ನಗರದ ಸನ್ಮಾರ್ಗ ಕಾಲೇಜಿನಲ್ಲಿ ಆಯೋಜಿಸಿದ್ದ ಶಂಕರಾಚಾರ್ಯರ 1238ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೇವಲ 32 ವರ್ಷಗಳ ಅಲ್ಪಾಯುಷ್ಯದಲ್ಲೇ ಜೀವಾತ್ಮ-ಪರಮಾತ್ಮ ಒಂದೇ ಎಂಬ ಅದ್ವೈತ ತತ್ವವನ್ನು ಜಗತ್ತಿಗೆ ಸಾರಿದ ಮಹಾನ್ ಸಂತರು ಶಂಕರಭಗವತ್ಪಾದರು ಎಂದು ತಿಳಿಸಿದರು.

ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ ಮಾತನಾಡಿ, ಸನಾತನ ಸಂಸ್ಕೃತಿ ಮತ್ತು ಅದ್ವೈತ ತತ್ವದ ಪ್ರಸಾರಕ್ಕಾಗಿ ಶೃಂಗೇರಿ, ಪುರಿ, ದ್ವಾರಕಾ ಹಾಗೂ ಬದರಿ ಮಠಗಳನ್ನು ಸ್ಥಾಪಿಸುವ ಮೂಲಕ ಭಾರತೀಯ ಸಂಸ್ಕೃತಿಯ ಸಂರಕ್ಷಣೆಗೆ ಶಂಕರಾಚಾರ್ಯರು ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು. ಜಗತ್ತು ಭ್ರಮೆಯಲ್ಲ, ಅದು ತುಲನಾತ್ಮಕವಾಗಿ ನೈಜವೆಂಬ ತತ್ವವನ್ನು ಅವರು ಪ್ರತಿಪಾದಿಸಿದ್ದಾರೆ ಎಂದರು.

ಕಾರ್ಯಕ್ರಮದ ಅಂಗವಾಗಿ ಆಡಳಿತಾಧಿಕಾರಿ ಶ್ರೀ ಎಂ.ಸಿ. ಹಿರೇಮಠ ಅವರ ನೇತೃತ್ವದಲ್ಲಿ ಶಂಕರಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಉಪನ್ಯಾಸಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka